ಸಂಪುಟ : 9 ಸಂಚಿಕೆ 264 ಪುಟ : 4 ಬೆಲೆ: 3.00 ಶನಿವಾರ ನವೆಂಬರ್ 30 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 264 Pages : 4 Price : 3.00 Saturday November 30 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಡಂಬಳ ಕೆರೆಗೆ ಬಾಗಿನ ಅರ್ಪಣೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ



ಜಿಲ್ಲೆಯ ರೋಣ ಮತಕ್ಷೇತ್ರದ ಹಾಗೂ ಮುಂಡರಗಿ ತಾಲೂಕಿನ ಡಂಬಳ ಗ್ರಾಮದ ಐತಿಹಾಸಿಕ ಪ್ರಸಿದ್ಧ ಕೆರೆಗೆ ಡಿ. 1ರಂದು ಬೆಳಿಗ್ಗೆ 11ಕ್ಕೆ ಬಾಗಿನ ಅರ್ಪಣೆ ಕಾರ್ಯಕ್ರಮ ಜರುಗಲಿದೆ.

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹಾಗೂ ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಅವರು ಬಾಗಿನ ಅರ್ಪಣೆ ಮಾಡುವರು.

ಕಾರ್ಯಕ್ರಮದಲ್ಲಿ ಬ್ಲಾಕ್ ಕಾಂಗ್ರೆಸ್ ವ್ಯಾಪ್ತಿಯ ಕಾಂಗ್ರೆಸ್ ಮುಖಂಡರು, ಜಿಲ್ಲಾ ಹಾಗೂ ತಾಲೂಕು ಮಟ್ಟದ

ವಿವಿಧ ಸಮಿತಿಗಳ ಸದಸ್ಯರು, ಗ್ರಾಮ ಪಂಚಾಯಿತಿ ಸದಸ್ಯರು, ಡಂಬಳ ಹೋಬಳಿಯ ಎಲ್ಲ ಗ್ರಾಮಗಳ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸುವರು ಎಂದು ಶಾಸಕರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

### ಪ್ರೈಮ್ ಸ್ಪೋರ್ಟ್ಸ್ ಪಾರ್ಕ್ ವತಿಯಿಂದ ನಿರ್ಮಾಣಗೊಂಡ ಟರ್ಫ್ ಕ್ರೀಡಾಂಗಣ

# ಸುಸಜ್ಜಿತ ಕ್ರೀಡಾಂಗಣ ಉದ್ಘಾಟನೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರೈಮ್ ಸ್ಪೋರ್ಟ್ಸ್ ಪಾರ್ಕ್ ವತಿಯಿಂದ ನಗರದ ಕಳಸಾಪುರ ರಿಂಗ್ ರೋಡ್ ಹತ್ತಿರ ಟರ್ಫ್ ಕ್ರಿಕೆಟ್ ಮತ್ತು ಫುಟ್ಬಾಲ್ ಕ್ರೀಡಾಂಗಣ ನ. 30ರಂದು ಸಂಜೆ 5.30ಕ್ಕೆ ಉದ್ಘಾಟನೆಗೊಳ್ಳಲಿದೆ ಎಂದು ಎಸ್.ಎಚ್. ಶಿವನಗೌಡ್ರ ಹೇಳಿದರು. ಶುಕ್ರವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಮಾಜಿ ಸಿಎಂ ಹಾಗೂ ಹಾವೇರಿ-ಗದಗ ಸಂಸದ ಬಸವರಾಜ ಬೊಮ್ಮಾಯಿ ಅವರು ಕ್ರೀಡಾಂಗಣವನ್ನು ಉದ್ಘಾಟಿಸಲಿದ್ದಾರೆ. ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ, ಮಾಜಿ ಸಚಿವ ಬಿ. ಶ್ರೀರಾಮುಲು, ಶಾಸಕ ಸಿ.ಸಿ. ಪಾಟೀಲ ಸೇರಿದಂತೆ ಜಿಲ್ಲೆಯ ಇನ್ನಿತರ ಜನಪ್ರತಿನಿಧಿಗಳು ಮತ್ತು ಖ್ಯಾತ ಕ್ರಿಕೆಟಿಗ ಅನಿರುದ್ಧ ಜೋಶಿ ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಕೇರಳದ ಸುರೇಖಾ ಸಂಸ್ಥೆ ಈ ಟರ್ಫ್ ಕ್ರೀಡಾಂಗಣವನ್ನು ನಿರ್ಮಿಸಿದೆ. ದೇಶಾದ್ಯಂತ ಸುಮಾರು 1 ಸಾವಿರ ಕ್ರೀಡಾಂಗಣವನ್ನು ನಿರ್ಮಿಸಿದ ಅನುಭವಿ ಸಂಸ್ಥೆ ಇದಾಗಿದ್ದು, ಗದುಗಿನಲ್ಲಿಯೂ ಅಂತಾರಾಷ್ಟ್ರೀಯ ಗುಣಮಟ್ಟದ ಟರ್ಫ್ ಅಂಕಣವನ್ನು ನಿರ್ಮಿಸಿದೆ. ಒಟ್ಟು 11 ಸಾವಿರ ಚದರ ಅಡಿ ವಿಸ್ತೀರ್ಣದಲ್ಲಿ



ನಿರ್ಮಿಸಲಾಗಿರುವ ಈ ಕ್ರೀಡಾಂಗಣದಲ್ಲಿ ಕ್ರಿಕೆಟ್, ಫುಟ್ಬಾಲ್, ವಾಲಿಬಾಲ್ ಇನ್ನಿತರ ಕ್ರೀಡೆಗಳನ್ನು ಹಗಲು ಮತ್ತು ರಾತ್ರಿ ಹೊತ್ತಿನಲ್ಲೂ ಆಡಲು ಅನುಕೂಲ ಆಗುವಂತೆ ರೂಪಿಸಲಾಗಿದೆ. ಅಲ್ಲದೇ ಕ್ರೀಡಾಂಗಣದಲ್ಲಿ ಡ್ರೆಸ್ಸಿಂಗ್ ರೂಂ, ಸಿ.ಸಿ ಟಿವಿ ಹಾಗೂ ಇನ್ನಿತರ ಅನೇಕ ಸೌಲಭ್ಯಗಳನ್ನು ಒದಗಿಸಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ನಾರಾಯಣ ಕುಡತಕರ, ರಾಘವೇಂದ್ರ ಬಾರಡ, ಸಂತೋಷ ಚನ್ನಪ್ಪನವರ, ವರ್ಧಮಾನ್ ಜೈನ್, ಗೌತಮ್ ಜೈನ್, ಸಾಗರ ಶಿವನಗೌಡರ ಮುಂತಾದವರು ಉಪಸ್ಥಿತರಿದ್ದರು.

ಈ ಕ್ರೀಡಾಂಗಣದ ಸದುಪಯೋಗ ಪಡೆಯಬಯಸುವ ಆಸಕ್ತರು ಮುಂಗಡವಾಗಿ ಕಾಯ್ದಿರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಆನ್‌ಲೈನ್‌ನಲ್ಲಿಯೂ ಬುಕಿಂಗ್ ಮಾಡಬಹುದು ಎಂದು ಎಸ್.ಎಚ್. ಶಿವನಗೌಡ್ರ ತಿಳಿಸಿದರು.

### ಮಾಜಿ ಶಾಸಕ ಡಿ.ಆರ್. ಪಾಟೀಲರ ಬದುಕು, ಚಿಂತನೆಯ ಕುರಿತ ಹೊತ್ತಿಗೆ

# ‘ಸಂತ ರಾಜಕಾರಣಿ’ ಗ್ರಂಥ ಬಿಡುಗಡೆ ಡಿ.4ಕ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಮಾಜಿ ಶಾಸಕ ಡಿ.ಆರ್. ಪಾಟೀಲರು ಸಂತ ರಾಜಕಾರಣಿ ಎಂದೇ ಖ್ಯಾತರಾದವರು. ಅವರ ಕುರಿತಾದ ಅಭಿನಂದನಾ ಗ್ರಂಥವು ಇದೇ ಡಿ. 4ರಂದು ಬೆಳಗ್ಗೆ 10.30ಕ್ಕೆ ಶ್ರೀಮಠದ ಆವರಣದ ಶಿವಾನುಭವ ಮಂಟಪದಲ್ಲಿ ಬಿಡುಗಡೆಗೊಳ್ಳಲಿದೆ ಎಂದು ತೋಂಟದಾರ್ಯ ಮಠದ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟರ್ ಹೇಳಿದರು.

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಪ್ಪಟ ಗಾಂಧಿವಾದಿಗಳಾಗಿರುವ ಡಿ.ಆರ್. ಪಾಟೀಲರ ಅಭಿನಂದನಾ ಗ್ರಂಥವನ್ನು ಗಾಂಧಿ ಭವನದ ಅಧ್ಯಕ್ಷ ವೂಡೆ ಪಿ.ಕೃಷ್ಣಾ ಅವರು ಉದ್ಘಾಟಿಸಲಿದ್ದಾರೆ. ಸಾನ್ನಿಧ್ಯವನ್ನು ತೋಂಟದ ಸಿದ್ಧರಾಮ ಸ್ವಾಮೀಜಿ, ರಾಮಕೃಷ್ಣ ಆಶ್ರಮಮದ ನಿರ್ಭಯಾನಂದ ಸ್ವಾಮೀಜಿ ವಹಿಸುವರು. ಸಭಾಪತಿ ಬಸವರಾಜ ಹೊರಟ್ಟಿ, ಕಾನೂನು ಸಚಿವ ಎಚ್.ಕೆ. ಪಾಟೀಲ, ಕಂದಾಯ ಸಚಿವ ಕೃಷ್ಣ ಭೈರೇಗೌಡ, ಹಣಕಾಸು ಆಯೋಗದ ಅಧ್ಯಕ್ಷ ಸಿ. ನಾರಾಯಣಸ್ವಾಮಿ, ಸಂಸದ ಬಸವರಾಜ ಬೊಮ್ಮಾಯಿ, ಶಾಸಕರಾದ ಜಿ.ಎಸ್. ಪಾಟೀಲ, ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಸಲೀಂ ಅಹ್ಮದ್, ವೆಂಕಟರಾವ್ ಘೋರ್ಪಡೆ, ಮಾಜಿ ಸಚಿವ ಎಸ್. ಎಸ್. ಪಾಟೀಲ ಮುಂತಾದವರು ಆಗಮಿಸಲಿದ್ದಾರೆ ಎಂದರು.

> ಈ ಗ್ರಂಥದಲ್ಲಿ ಡಿ.ಆರ್. ಪಾಟೀಲರ ಕುರಿತು ಒಂದೇ ಒಂದು ಉತ್ಪ್ರೇಕ್ಷೆ ಇಲ್ಲ, ಅಸತ್ಯವಾದ ಸಂಗತಿ ಹಾಗೂ ವೈಭವೀಕರಣ ಮಾಡಿಲ್ಲ. ಲಿಂ. ತೋಂಟದ ಸಿದ್ಧಲಿಂಗ ಶ್ರೀಗಳಿಗೆ ನೀಡಿದ ವಚನದಂತೆ ಡಿ.ಆರ್. ಪಾಟೀಲರ ಅಭಿನಂದನಾ ಗ್ರಂಥ ಬಿಡುಗಡೆಗೆ ಸಜ್ಜಾಗಿದೆ. ಅದರ ಸಂಪೂರ್ಣ ಶ್ರೇಯಸ್ಸು ಶ್ರೀಮಠಕ್ಕೆ ಸಲ್ಲಬೇಕು ಎಂದು ಜೆ.ಕೆ. ಜಮಾದಾರ ಹೇಳಿದರು.

ಅಭಿನಂದನಾ ಗ್ರಂಥದ ಸಂಪಾದಕ ಜೆ.ಕೆ. ಜಮಾದಾರ ಮಾತನಾಡಿ, ಡಿ.ಆರ್. ಪಾಟೀಲ ಕೇವಲ ಒಬ್ಬ ಮಾಜಿ ಶಾಸಕರು ಮಾತ್ರವಲ್ಲದೇ, ಗ್ರಾಮೀಣಾಭಿವೃದ್ಧಿಯ ಹರಿಕಾರರಾಗಿ, ಜಿ.ಪಂ ಸದಸ್ಯರಾಗಿ, ಎಪಿಎಂಸಿ ಸದಸ್ಯರಾಗಿ ಮಾಡಿದ ಸಾಧನೆ, ಅವರ ಬದುಕು, ಚಿಂತನೆಯನ್ನು ಅಭಿನಂದನಾ ಗ್ರಂಥದಲ್ಲಿ ಕಟ್ಟಿಕೊಡುವ ಪ್ರಯತ್ನ ಮಾಡಲಾಗಿದೆ ಎಂದು ತಿಳಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರ, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಆರ್.ಬಿ. ಬೆನಕೊಪ್ಪ, ನಿವೃತ್ತ ಡಿಡಿಪಿಐ ನಾಗರಹಳ್ಳಿ, ಗಂಗಾಧರ ಹಿರೇಮಠ, ಕೊಟ್ರೇಶ ಮೆಣಸಿನಕಾಯಿ, ಪ್ರವೀಣ ಇತರರು ಉಪಸ್ಥಿತರಿದ್ದರು.

### ಮುಗಿಯದ ಗದ್ದಲ-ಪ್ರತಿಭಟನೆ, 4ನೇ ದಿನದ ಕಲಾಪವೂ ವ್ಯರ್ಥ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸಂಸತ್ತಿನ ಚಳಿಗಾಲದ ಅಧಿವೇಶನ ಇಂದು ನಾಲ್ಕನೇ ದಿನಕ್ಕೆ ಕಾಲಿಟ್ಟರೂ ಯಾವುದೇ ಆರೋಗ್ಯಯುತ ಚರ್ಚೆ ನಡೆಯದೇ ಗದ್ದಲ-ಪ್ರತಿಭಟನೆಗೆ ಮಾತ್ರ ಸೀಮಿತವಾಗಿದೆ. ಇದರ ಪರಿಣಾಮ ಇಂದೂ ಕೂಡ ರಾಜ್ಯಸಭಾ ಕಲಾಪವನ್ನು ಸೋಮವಾರಕ್ಕೆ ಮುಂದೂಡಲಾಯಿತು. ಇತ್ತ ಲೋಕಸಭೆ ಕಲಾಪವನ್ನು ಮಧ್ಯಾಹ್ನದವರೆಗೆ ಮುಂದೂಡಲಾಗಿದೆ.

**ರಾಜ್ಯಸಭೆ ಕಲಾಪ:** ಇಂದು ರಾಜ್ಯಸಭೆ ಸೇರುತ್ತಿದ್ದಂತೆ ಅದಾನಿ ಸಂಸ್ಥೆಯ ಮೇಲಿನ ಲಂಚದ ಆರೋಪ ಪ್ರಕರಣ, ಮಣಿಪುರ ಹಾಗೂ ಸಂಭಾಲ್ ಹಿಂಸಾಚಾರ ವಿಚಾರದ ಚರ್ಚೆಗೆ ಸಭಾಪತಿಗಳು ನೋಟಿಸ್ ತಿರಸ್ಕರಿಸಿದ ಹಿನ್ನೆಲೆಯಲ್ಲಿ ಪ್ರತಿಪಕ್ಷಗಳು ಪ್ರತಿಭಟನೆ ನಡೆಸಿದವು.




### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ಏಕೀಕರಣ ದೀರ್ಘ ಹೋರಾಟದ ಫಲ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಏಕೀಕರಣ ಹೋರಾಟದ ಹಿಂದೆ ಅನೇಕ ಮಹಾತ್ಮರ, ಹೋರಾಟಗಾರರ ಶ್ರಮವಿದೆ. ನಾಡಿನ ಭವ್ಯ ಪರಂಪರೆಯ ಇತಿಹಾಸವಿದೆ. ಕನ್ನಡಿಗರ ದೀರ್ಘ ಕಾಲದ ಹೋರಾಟದ ಫಲವೇ ಕರ್ನಾಟಕ ಏಕೀಕರಣ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2721ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ಕನ್ನಡ ಭಾಷೆ ಮಾತನಾಡುವ ಜನರು ಅರ್ಧದಷ್ಟು ಮೈಸೂರು ಪ್ರಾಂತ್ಯದಲ್ಲಿ, ಇನ್ನರ್ಧದಷ್ಟು ಮುಂಬೈ ಪ್ರಾಂತ್ಯದಲ್ಲಿ, ಮತ್ತೊಂದಿಷ್ಟು ಹೈದ್ರಾಬಾದ್ ಪ್ರಾಂತ್ಯದಲ್ಲಿ ಹರಿದು ಹಂಚಿಹೋಗಿದ್ದರು. ಕನ್ನಡ ಭಾಷಿಕರ ಪ್ರದೇಶವನ್ನು ಒಗ್ಗೂಡಿಸಲು ಆಲೂರು ವೆಂಕಟರಾಯರು, ದೊಡ್ಡಮೇಟಿ ಅಂದಾನಪ್ಪನವರು, ಕೌತಾಳ ವೀರಪ್ಪನವರು, ಹುಯಿಲಗೋಳ ನಾರಾಯಣರಾಯರು, ಡೆಪ್ಯೂಟಿ ಚೆನ್ನಬಸಪ್ಪನವರು ಹೀಗೆ ಅನೇಕ ಮಹಾತ್ಮರು ಹೋರಾಟ ಮಾಡಿ ಕನ್ನಡ ತಲೆಯೆತ್ತಿ ನಿಲ್ಲುವಂತೆ ಮಾಡಿದರು.



> ಉಪನ್ಯಾಸಕರಾಗಿ ಆಗಮಿಸಿದ ಕಡೂರಿನ ಸಿಂಗಟಗೆರಿಯ ಕಲ್ಮೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ಡಾ. ಜಿ.ವಿ. ಮಂಜುನಾಥ ಮಾತನಾಡಿ, ಬ್ರಿಟಿಷ್ ಅಧಿಕಾರಕ್ಕೆ ಒಳಗಾದ ಎಲ್ಲಾ ಕನ್ನಡದ ಊರು, ತಾಲೂಕು, ಜಿಲ್ಲೆಗಳನ್ನು ಒಟ್ಟುಗೂಡಿಸಿ, ಒಂದೇ ರಾಜಕೀಯ ವಿಭಾಗ ಹೇಗಾಯಿತು ಎಂಬ ಬಗ್ಗೆ ತಿಳಿಸಿದರು. ಕರ್ನಾಟಕ ಪ್ರಾಂತ ರಚನೆಯ ವಿಚಾರವನ್ನು ಮಹಾತ್ಮಾ ಗಾಂಧೀಜಿಯವರು ಒಪ್ಪಿದ್ದನ್ನು ಅದರ ಹಿಂದಿನ ಒತ್ತಾಯವನ್ನು ಮನೋಜ್ಞವಾಗಿ ತಿಳಿಸಿದರು.

ಕೆ.ಎಲ್.ಇ. ಸಂಸ್ಥೆಯ ಸಪ್ತರ್ಷಿಗಳು ಮರಾಠಿಗರ ಕಿರುಕುಳ ಸಹಿಸಿಕೊಂಡು ಕನ್ನಡ ಕಟ್ಟಿದರು. ಹಾಗೆಯೇ ಅನೇಕ ಮಠಮಾನ್ಯಗಳು ಕನ್ನಡ ಉಳಿಸುವ ಕಾರ್ಯವನ್ನು ಮಾಡಿದರು. ಅದರಲ್ಲಿ ಬೆಳಗಾಂವದ ನಾಗನೂರುಮಠ ಮುಂಚೂಣಿಯಲ್ಲಿದೆ. ಬೀದರಿನಲ್ಲಿ ಭಾಲ್ಕಿ ಪಟ್ಟದೇವರು ಹೊರಗೆ ಉರ್ದು ಶಾಲೆ ಎಂದು ಬೋರ್ಡ್ ಹಾಕಿ ಒಳಗೆ ಕನ್ನಡ ಕಲಿಸಿದರು ಎಂದು ಸ್ಮರಿಸಿದರು.

ವಿಶೇಷ ಆಹ್ವಾನಿತರಾಗಿ ಆಗಮಿಸಿದ ಶಂಕರಣ್ಣ ಮುನವಳ್ಳಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಪ್ರತಿಯೊಬ್ಬರು ಹುಟ್ಟಿದ ಮೇಲೆ ಸಮಾಜಕ್ಕಾಗಿ ಏನಾದರೂ ಕೆಲಸ ಮಾಡಬೇಕು. ಸಮಾಜದ ಏಳ್ಗೆಗೆ ಶ್ರಮಿಸಬೇಕು. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳೊಂದಿಗೆ ಡಂಬಳದವರೆಗೆ ಪಾದಯಾತ್ರೆ ಮಾಡಿದ್ದನ್ನು ಸ್ಮರಿಸಿಕೊಂಡರು. ನಾವು ಬದುಕಬೇಕು, ಸಮಾಜವನ್ನು ಬದುಕಿಸಬೇಕು. ಇದು ನಮ್ಮ ಗುರಿಯಾಗಬೇಕು ಎಂದರು.

ಹುಬ್ಬಳ್ಳಿಯ ಕೆ.ಎಲ್.ಇ. ಸಂಸ್ಥೆಯ ಬಿವಿಬಿ ಕಾಲೇಜಿನ ಪ್ರಾಧ್ಯಾಪಕ ವಿರೂಪಾಕ್ಷಯ್ಯ ಹೊಸಳ್ಳಿಮಠರಿಂದ ಬಾನ್ಸುರಿ ವಾದನ ನಡೆಯಿತು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ಸಂಗೀತ ಸೇವೆ ನೆರವೇರಿಸಿದರು. ಮುಖ್ಯ ಅತಿಥಿಗಳಾಗಿ ಸಂಶಿಮಠ ಹಾಗೂ ಈಶಣ್ಣ ಮುನವಳ್ಳಿ ಆಗಮಿಸಿದ್ದರು. ಧರ್ಮಗ್ರಂಥ ಪಠಣವನ್ನು ಶ್ರಾವಂತಿ ಎಸ್.ಕಟ್ಟಿ ಹಾಗೂ ವಚನ ಚಿಂತನವನ್ನು ವೀಣಾ ಬಿ.ಕಟ್ಟಿ ಮಾಡಿದರು. ದಾಸೋಹ ಸೇವೆಯನ್ನು ಮುರಿಗೆಪ್ಪ ಎಸ್.ನಾಲ್ವಾಡ, ಎಸ್.ಎಂ. ನಾಲ್ವಾಡ & ಕಂಪನಿ ಗದಗ ಹಾಗೂ ಪರಿವಾರದವರು ನೆರವೇರಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಮಿತಿಯ ಚೇರ್ಮನ್ ಐ.ಬಿ. ಬೆನಕೊಪ್ಪ ಹಾಗೂ ಸರ್ವಸದಸ್ಯರು ಉಪಸ್ಥಿತರಿದ್ದರು. ಡಾ. ಉಮೇಶ ಪುರದ ಪರಿಚಯಿಸಿದರೆ, ಬಾಲಚಂದ್ರ ಭರಮಗೌಡ್ರ ಸ್ವಾಗತಿಸಿದರು. ಮಂಜುಳಾ ಹಾಸಿಲಕರ ನಿರೂಪಿಸಿದರು.

## ಮುರಿದ ಸಂಬಂಧಗಳು ಆತ್ಮಹತ್ಯೆಗೆ ಪ್ರಚೋದನೆ ನೀಡುವುದಿಲ್ಲ: ಸುಪ್ರೀಂ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮುರಿದ ಸಂಬಂಧಗಳು, ಭಾವನಾತ್ಮಕವಾಗಿ ಯಾತನೆಯಿದ್ದರೂ, ಕ್ರಿಮಿನಲ್ ಅಪರಾಧಕ್ಕೆ ಕಾರಣವಾಗುವ ಉದ್ದೇಶದ ಅನುಪಸ್ಥಿತಿಯಲ್ಲಿ ಆತ್ಮಹತ್ಯೆಗೆ ಪ್ರಚೋದನೆಯಾಗುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಶುಕ್ರವಾರ ಹೇಳಿದೆ.

ಐಪಿಸಿ ಅಡಿಯಲ್ಲಿ ವಂಚನೆ ಮತ್ತು ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಅಪರಾಧಗಳಿಗಾಗಿ ಕರ್ನಾಟಕ ಹೈಕೋರ್ಟ್ ಕಮರುದ್ದೀನ್ ದಸ್ತಗೀರ್ ಸನದಿ ಎಂಬಾತನಿಗೆ ವಿಧಿಸಿದ್ದ ಶಿಕ್ಷೆಯನ್ನು ರದ್ದುಗೊಳಿಸಿದ ತೀರ್ಪಿನಲ್ಲಿ ನ್ಯಾಯಮೂರ್ತಿಗಳಾದ ಪಂಕಜ್ ಮಿಥಾಲ್ ಮತ್ತು ಉಜ್ಜಲ್ ಭುಯಾನ್ ಅವರ ಪೀಠದಿಂದ ಈ ಹೇಳಿಕೆಗಳು ಬಂದವು.

ಇದು ಸಂಬಂಧ ಮುರಿದು ಬಿದ್ದಿರುವ ಪ್ರಕರಣವೇ ಹೊರತು ಕ್ರಿಮಿನಲ್ ನಡವಳಿಕೆಯಲ್ಲ" ಎಂದು ತೀರ್ಪಿನಲ್ಲಿ ಹೇಳಲಾಗಿದೆ.

ಆರಂಭದಲ್ಲಿ ಸನದಿ ವಿರುದ್ಧ ಐಪಿಸಿಯ ಸೆಕ್ಷನ್ 417 (ವಂಚನೆ), 306 (ಆತ್ಮಹತ್ಯೆಗೆ ಪ್ರಚೋದನೆ) ಮತ್ತು 376 (ಅತ್ಯಾಚಾರ) ಅಡಿಯಲ್ಲಿ ಆರೋಪ ಹೊರಿಸಲಾಗಿತ್ತು.

ವಿಚಾರಣಾ ನ್ಯಾಯಾಲಯವು ಅವರನ್ನು ಎಲ್ಲ ಆರೋಪಗಳಿಂದ ಖುಲಾಸೆಗೊಳಿಸಿದರೆ, ರಾಜ್ಯದ ಮೇಲ್ಮನವಿಯ ಮೇರೆಗೆ ಕರ್ನಾಟಕ ಹೈಕೋರ್ಟ್ ವಂಚನೆ ಮತ್ತು ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಆರೋಪದಲ್ಲಿ ಆತನಿಗೆ ಐದು ವರ್ಷಗಳ ಜೈಲು ಶಿಕ್ಷೆ ಮತ್ತು 25,000 ದಂಡವನ್ನು ವಿಧಿಸಿತು.

ಎಫ್‌ಐಆರ್ ಪ್ರಕಾರ, ಆಕೆಯ 21 ವರ್ಷದ ಮಗಳು ಕಳೆದ ಎಂಟು ವರ್ಷಗಳಿಂದ ಆರೋಪಿಯನ್ನು ಪ್ರೀತಿಸುತ್ತಿದ್ದಳು. ಮದುವೆಯಾಗುವುದಾಗಿ ನೀಡಿದ ಭರವಸೆಯನ್ನು ಉಳಿಸಿಕೊಳ್ಳಲು ನಿರಾಕರಿಸಿದ ನಂತರ ಆಗಸ್ಟ್ 2007 ರಲ್ಲಿ ಆತ್ಮಹತ್ಯೆ ಮಾಡಿಕೊಂಡಳು.

ಈ ಬಗ್ಗೆ ತೀರ್ಪು ನೀಡಿರುವ ನ್ಯಾಯಮೂರ್ತಿ ಮಿಥಾಲ್, ಮಹಿಳೆಯ ಎರಡು ಸಾಯುತ್ತಿರುವ ಘೋಷಣೆಗಳನ್ನು ವಿಶ್ಲೇಷಿಸಿದ್ದಾರೆ. ದಂಪತಿಗಳ ನಡುವೆ ಯಾವುದೇ ದೈಹಿಕ ಸಂಬಂಧದ ಆರೋಪವಿಲ್ಲ ಅಥವಾ ಆತ್ಮಹತ್ಯೆಗೆ ಕಾರಣವಾಗುವ ಯಾವುದೇ ಉದ್ದೇಶಪೂರ್ವಕ ಕೃತ್ಯವಿಲ್ಲ ಎಂದು ಗಮನಿಸಿದರು.

ಆದ್ದರಿಂದ ತೀರ್ಪಿನಲ್ಲಿ ಮುರಿದ ಸಂಬಂಧಗಳು ಭಾವನಾತ್ಮಕವಾಗಿ ದುಃಖವನ್ನುಂಟುಮಾಡುತ್ತವೆ. ಆದರೆ, ಸ್ವಯಂಚಾಲಿತವಾಗಿ ಕ್ರಿಮಿನಲ್ ಅಪರಾಧಗಳಾಗಿರುವುದಿಲ್ಲ ಎಂದರು.

## ನರ್ಸ್ ಮೇಲೆ ಸಾಮೂಹಿಕ ಅತ್ಯಾಚಾರ : ಗುಪ್ತಾಂಗಕ್ಕೆ ಕೋಲು, ಮೆಣಸಿನ ಪುಡಿ ಎರಚಿ ಕ್ರೌರ್ಯ

■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ನರ್ಸ್ ಮೇಲೆ ಇಬ್ಬರು ವ್ಯಕ್ತಿಗಳು ಸಾಮೂಹಿಕ ಅತ್ಯಾಚಾರವೆಸಗಿ ಗುಪ್ತಾಂಗಕ್ಕೆ ಕೋಲು ತುರುಕಿ, ಮೆಣಸಿನ ಪುಡಿ ಎರಚಿ ಕ್ರೌರ್ಯ ಮೆರೆದಿರುವ ಆಪಾದಿತ ಘಟನೆ ಉತ್ತರ ಪ್ರದೇಶ ಜಲೌನ್‌ನಲ್ಲಿ ನಡೆದಿದೆ ಎಂದು ವರದಿಯಾಗಿದೆ.

ಇತರ ನಾಲ್ವರು ನನ್ನ ಮೇಲೆ ಮನಸೋಇಚ್ಛೆ ಹಲ್ಲೆ ನಡೆಸಿದ್ದಾಗಿಯೂ ಸಂತ್ರಸ್ತೆ ದೂರಿದ್ದಾರೆ. ಆಕೆಯ ಕುಟುಂಬಸ್ಥರು ಘಟನೆ ಬಗ್ಗೆ ಪೊಲೀಸರಿಗೆ ದೂರು ನೀಡಿದ್ದಾರೆ.

## ಇಸ್ರೇಲ್-ಹೆಜ್ಬೊಲ್ಲಾಹ್ ಕದನ ವಿರಾಮ ಘೋಷಣೆ; ಮನೆಗೆ ಮರಳಿದ ಸಾವಿರಾರು ಲೆಬನಾನಿಗಳು



■ವಿಜಯಸಾಕ್ಷಿ ಸುದ್ದಿ, ಇಸ್ರೇಲ್

ಇಸ್ರೇಲ್ ಮತ್ತು ಹೆಜ್ಬೊಲ್ಲಾ ನಡುವಿನ ಯುದ್ಧದಿಂದ ಸ್ಥಳಾಂತರಗೊಂಡಿದ್ದ ಸಾವಿರಾರು ಲೆಬನಾನಿಗಳು ಬುಧವಾರ ಕದನ ವಿರಾಮವನ್ನು ಹಿನ್ನೆಲೆಯಲ್ಲಿ ಮನೆಗೆ ಮರಳಿದರು. ವೈಯಕ್ತಿಕ ವಸ್ತುಗಳನ್ನು ಜೋಡಿಸಲಾದ ಕಾರುಗಳನ್ನು ಚಾಲನೆ ಮಾಡಿ, ಕೆಲವು ಪ್ರದೇಶಗಳನ್ನು ತಪ್ಪಿಸಬೇಕು ಎಂಬ ಲೆಬನಾನ್ ಮತ್ತು ಇಸ್ರೇಲಿ ಪಡೆಗಳ ಎಚ್ಚರಿಕೆಗಳನ್ನು ಧಿಕ್ಕರಿಸಿದರು.

ಕದನ ವಿರಾಮವು ಇಸ್ರೇಲ್ ಮತ್ತು ಹೆಜ್ಬೊಲ್ಲಾ ನಡುವಿನ ಸುಮಾರು 14 ತಿಂಗಳ ಹೋರಾಟವನ್ನು ಕೊನೆಗೊಳಿದೆ. ಉಭಯ ದೇಶಗಳ ನಡುವಿನ ದಾಳಿ ವಿನಿಮಯ ಸೆಪ್ಟೆಂಬರ್ ಮಧ್ಯದಲ್ಲಿ ಸಂಪೂರ್ಣ ಯುದ್ಧಕ್ಕೆ ಏರಿತು.

ಈ ಒಪ್ಪಂದವು ಗಾಜಾದಲ್ಲಿನ ಯುದ್ಧವನ್ನು ತಿಳಿಗೊಳಿಸುವುದಿಲ್ಲ. ಇತ್ತೀಚಿನ ಮಾಹಿತಿಗಳ ಪ್ರಕಾರ, ಅಲ್ಲಿ ಇಸ್ರೇಲಿಯು ಗಾಜಾ ನಗರದಲ್ಲಿ ಎರಡು ಶಾಲೆಗಳು-ಆಶ್ರಯಗಳ ಮೇಲೆ ದಾಳಿ ನಡೆಸಿದ್ದು, ಆಸ್ಪತ್ರೆಯ ಅಧಿಕಾರಿಗಳ ಪ್ರಕಾರ 11 ಜನರನ್ನು ಕೊಂದಿದೆ. ಒಂದು ದಾಳಿಯು ಹಮಾಸ್ ಸ್ನೈಪರ್ ಅನ್ನು ಗುರಿಯಾಗಿಸಿಕೊಂಡಿದೆ. ಇನ್ನೊಂದು ನಾಗರಿಕರ ನಡುವೆ ಅಡಗಿರುವ ಉಗ್ರಗಾಮಿಗಳನ್ನು ಗುರಿಯಾಗಿಸಿದೆ ಎಂದು ಇಸ್ರೇಲ್ ಹೇಳಿದೆ.

ಲೆಬನಾನ್‌ನಲ್ಲಿನ ಕದನ ವಿರಾಮವು ಹೋರಾಟದಿಂದ ಸ್ಥಳಾಂತರಗೊಂಡ 1.2 ಮಿಲಿಯನ್ ಲೆಬನಾನಿಗಳಿಗೆ ಮತ್ತು ಗಡಿಯುದ್ದಕ್ಕೂ ತಮ್ಮ ಮನೆಗಳನ್ನು ತೊರೆದ ಹತ್ತಾರು ಸಾವಿರ ಇಸ್ರೇಲಿಗಳಿಗೆ ವಿರಾಮ ನೀಡಬಹುದು.

ಮಂಗಳವಾರ ತಡವಾಗಿ ಇಸ್ರೇಲ್‌ನಿಂದ ಅನುಮೋದಿಸಲಾದ ಯುಎಸ್ ಮತ್ತು ಫ್ರಾನ್ಸ್ ಮಧ್ಯಸ್ಥಿಕೆಗಾರರ ಒಪ್ಪಂದವು, ಹೋರಾಟವನ್ನು ಎರಡು ತಿಂಗಳ ಆರಂಭಿಕ ನಿಲುಗಡೆಗೆ ಕರೆ ನೀಡುತ್ತದೆ. ದಕ್ಷಿಣ ಲೆಬನಾನ್‌ನಲ್ಲಿ ಹೆಜ್ಬುಲ್ಲಾ ತನ್ನ ಸಶಸ್ತ್ರ ಉಪಸ್ಥಿತಿಯನ್ನು ಕೊನೆಗೊಳಿಸಬೇಕು. ಆದರೆ, ಇಸ್ರೇಲಿ ಪಡೆಗಳು ತಮ್ಮ ಗಡಿಯ ಕಡೆಗೆ ಹಿಂತಿರುಗಬೇಕು ಎಂದು ಒಪ್ಪಂದಕ್ಕೆ ಬರಲಾಗಿದೆ.

ಒಪ್ಪಂದದ ನಿಯಮಗಳನ್ನು ಉಲ್ಲಂಘಿಸಿದರೆ ಹೆಜ್ಬುಲ್ಲಾವನ್ನು ಹೊಡೆಯುವ ಹಕ್ಕನ್ನು ತಾನು ಕಾಯ್ದಿರಿಸಿದೆ ಎಂದು ಇಸ್ರೇಲ್ ಹೇಳುತ್ತದೆ. ಸ್ಥಳೀಯ ಕಮಾಂಡರ್ ಸೇರಿದಂತೆ ನಾಲ್ವರು ಹೆಜ್ಬುಲ್ಲಾ ಕಾರ್ಯಕರ್ತರನ್ನು ಸೇನೆಯು ಬಂಧಿಸಿದೆ ಎಂದು ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಕಚೇರಿ ತಿಳಿಸಿದೆ. ಅವರು ನಿರ್ಬಂಧಿತ ಪ್ರದೇಶವೆಂದು ಉಲ್ಲೇಖಿಸಿದ ಪ್ರದೇಶಕ್ಕೆ ಪ್ರವೇಶಿಸಿದ್ದಾರೆ. ಗಡಿಯ ಸಮೀಪವಿರುವ ಗ್ರಾಮಗಳಿಗೆ ಜನರು ಹಿಂತಿರುಗುವುದನ್ನು ತಡೆಯಲು ಪಡೆಗಳಿಗೆ ಆದೇಶಿಸಲಾಗಿದೆ ಎಂದು ಅದು ಹೇಳಿದೆ.

ಅಕ್ಟೋಬರ್ 7, 2023 ರಂದು ದಕ್ಷಿಣ ಇಸ್ರೇಲ್‌ಗೆ ಗಡಿಯಾಚೆಗಿನ ದಾಳಿಗೆ ಪ್ರತಿಕ್ರಿಯೆಯಾಗಿ ಇಸ್ರೇಲ್ ಇನ್ನೂ ಗಾಜಾದಲ್ಲಿ ಹಮಾಸ್ ಉಗ್ರಗಾಮಿಗಳೊಂದಿಗೆ ಹೋರಾಡುತ್ತಿದೆ.

### ಶ್ರೀಯುತ ದೇವೇಂದ್ರಪ್ಪ ನಾಗಪ್ಪ ಮೂರಶಿಳ್ಳಿನ ಅವರ ಸಹಸ್ರಚಂದ್ರ ದರ್ಶನ ಕಾರ್ಯಕ್ರಮದ ನಿಮಿತ್ತ ಲೇಖನ

# ಜೀವನ ಒಂದು ನಿತ್ಯೋತ್ಸವ!

ಬದುಕು ಎಂಬ ಪದವನ್ನು ಹಲವರು ಹಲವು ಆಯಾಮಗಳಲ್ಲಿ ವಿಶ್ಲೇಷಿಸುತ್ತಾರೆ. ಅದು ಅವರ ದೃಷ್ಟಿಕೋನ, ಅನುಭವ, ತಾವು ಪಡೆದ ಜ್ಞಾನ ಎದುರಿಸಿದ ಸಮಸ್ಯೆಗಳು, ಸಂಕಷ್ಟಗಳು ಎಲ್ಲದರ ಸಂಗಮವಾಗಿರುತ್ತದೆ. ಜೀವನವು ಒಂದು ನಿತ್ಯೋತ್ಸವ ಎನ್ನುವ ಆಶಯ ಬಹುಶಃ ನಾನು ನೋಡಿದ ಅಪರೂಪದ ವ್ಯಕ್ತಿತ್ವ ಶ್ರೀ ದೇವೇಂದ್ರಪ್ಪ ನಾಗಪ್ಪ ಮೂರ್‌ಶಿಳ್ಳಿನ ಅವರಿಗೆ ಹೋಲಿಕೆ ಆಗುತ್ತದೆ. ಜೀವನದಲ್ಲಿ ಬಹುತೇಕ ಏರಿಳಿತಗಳನ್ನು ಕಂಡು ಸಾಕಷ್ಟು ಪರವಿರೋಧ ನಿಲುವುಗಳ ಮಧ್ಯೆ ಸ್ಥಿತಪ್ರಜ್ಞೆ ಕಾಯ್ದುಕೊಂಡು ಅರ್ಥಪೂರ್ಣ ಪ್ರಾಮಾಣಿಕತೆಯ ಬದುಕನ್ನು ಸಾಗಿಸಿ, ಮಕ್ಕಳಿಗೆ ಮನೆತನಕ್ಕೆ ಸಮಾಜಕ್ಕೆ ಮಾದರಿಯಾಗಿ ನಿಂತ ವ್ಯಕ್ತಿತ್ವ ಹಿರಿಯರಾದ ಶ್ರೀ ದೇವೇಂದ್ರಪ್ಪ ಅವರದು. 80 ವಸಂತಗಳನ್ನು ಪೂರ್ಣಗೊಳಿಸಿ 90 ವಸಂತಕ್ಕೆ ಮುಖ ಮಾಡಿರುವ ದೇವೇಂದ್ರಪ್ಪ ನಾಗಪ್ಪ ಮೂರಶಿಳ್ಳಿನ ಅವರಿಗೆ ಅವರ ಹೆಮ್ಮೆಯ ಮಕ್ಕಳೆಲ್ಲ ಸೇರಿ ಸಹಸ್ರ ಚಂದ್ರ ದರ್ಶನ ಎನ್ನುವ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ಶ್ಲಾಘನೀಯ.

ಏನಿದು ಸಹಸ್ರಚಂದ್ರ ದರ್ಶನ ಕಾರ್ಯಕ್ರಮ ಎಂದಿರಾ? ಹೌದು, ಇದೊಂದು ವಿಶಿಷ್ಟವಾದ, ನಮ್ಮ ಹಿರಿಯರಿಗೆ ನಾವು ಸಲ್ಲಿಸುವ ಗೌರವದ ಸಂಕೇತವಾಗಿದೆ. ಸಾವಿರ ಹುಣ್ಣಿಮೆಗಳ ಮೈಲುಗಲ್ಲು ಎಂದು ಸಹ ಕರೆಯಲಾಗುತ್ತದೆ. ಇದೊಂದು ಹಿಂದೂ ಸಂಪ್ರದಾಯವೆನಿಸಿದರೂ ಹಲವು ಸಂಬಂಧಗಳನ್ನು ಕೂಡಿಸುವ, ಮುಂದಿನ ಪೀಳಿಗೆಗೆ ಜೀವನವನ್ನು ಪರಿಚಯಿಸುವ ವಿನೂತನ ಆಯಾಮವಾಗಿದೆ. ಒಬ್ಬ ವ್ಯಕ್ತಿ ತನ್ನ ಜೀವಿತಾವಧಿಯಲ್ಲಿ ಸಾವಿರ ಹುಣ್ಣಿಮೆಗಳಿಗೆ ಸಾಕ್ಷಿಯಾದ ಸಂದರ್ಭವನ್ನು ಗುರುತಿಸುವುದು ಹಾಗೂ ಆ ವ್ಯಕ್ತಿಗೆ 82 ವರ್ಷ ಪೂರೈಸಿದ ನಂತರದಲ್ಲಿ ವ್ಯಕ್ತಿಯ ಬದುಕನ್ನು




ಅವಲೋಕಿಸುವ, ಇಂದಿನ ಪೀಳಿಗೆಗೆ ಪರಿಚಯಿಸುವ ಪರಿಕಲ್ಪನೆ.

ದೇವೇಂದ್ರಪ್ಪ ನಾಗಪ್ಪ ಮೂರಶಿಳ್ಳಿನ ಅವರು 1940 ರಲ್ಲಿ ಜನಿಸಿ ಬಾಲ್ಯದಲ್ಲಿಯೇ ತಂದೆಯನ್ನು ಕಳೆದುಕೊಂಡು ಬದುಕಿನ ಜವಾಬ್ದಾರಿಯನ್ನು ತಮ್ಮ ಹೆಗಲಿಗೆ ಹೊತ್ತುಕೊಂಡು ತಾಯಿಯೊಂದಿಗೆ ಕಡುಬಡತನದಲ್ಲಿ ಜೀವನ ಸಾಗಿಸಿದವರು. ಬದುಕಿನ ಜವಾಬ್ದಾರಿಗಳಿಗೆ ಜೊತೆಯಾದ ಪಾರ್ವತಿ ಅಮ್ಮನವರು ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವಲ್ಲಿ ಇವರ ಪಾತ್ರ ಹಿರಿದು. ಇವರ ಹಿರಿಯ ಮಗ ವೈದ್ಯಕೀಯ ವೃತ್ತಿಯಲ್ಲಿ ಹೆಸರುವಾಸಿಯಾದವರು. ಅಷ್ಟೇ ಅಲ್ಲ, ಸಾಹಿತಿಗಳಾಗಿ ಸಾಹಿತ್ಯ ಕ್ಷೇತ್ರಕ್ಕೆ ತಮ್ಮ ಬರವಣಿಗೆಯ ಮೂಲಕ ಸೇವೆ ಸಲ್ಲಿಸುತ್ತಿರುವವರು ಡಾ. ಕಲ್ಲೇಶ್ ಮೂರಶಿಳ್ಳಿನ. ಇನ್ನುಳಿದ ಇಬ್ಬರು ಸುಪುತ್ರರಾದ ಸಿದ್ದಲಿಂಗೇಶ ಹಾಗೂ ವೀರೇಶ್ ಸಹ ಸರಾಫ್ ವೃತ್ತಿಯನ್ನೇ ಮುಂದುವರೆಸಿಕೊಂಡು ಹೋಗುತ್ತಿದ್ದಾರೆ.

ಇಂದು ಆಧುನಿಕ ಜೀವನಶೈಲಿಯ ಭರಾಟೆಯಲ್ಲಿ ಮನುಷ್ಯ ಯಾವುದೋ ಆಮಿಷಗಳಿಗೆ ಬಲಿಯಾಗುತ್ತಾ ಬದುಕಿನ ಅದೆಷ್ಟೋ ಸುಂದರ ಕ್ಷಣಗಳನ್ನು ಅನುಭವಿಸುವುದನ್ನು ಜೊತೆಗೆ ಪರಸ್ಪರ ಪ್ರೀತಿ, ವಾತ್ಸಲ್ಯ, ಮಮತೆ, ಜವಾಬ್ದಾರಿ, ಗೌರವ ಇವೆಲ್ಲವುಗಳನ್ನು ಎಲ್ಲೋ ಒಂದು ಕಡೆ ತನ್ನಿಂದ ತಾನೇ ಕಳೆದುಕೊಳ್ಳುತ್ತಿರುವ ವಿಷಾದದ ಸಂದರ್ಭದಲ್ಲಿ ಈ ಕುಟುಂಬದ ಮಕ್ಕಳು ಸೇರಿ ತಮ್ಮ ತಂದೆ-ತಾಯಿಗೆ ಗೌರವ ಸಲ್ಲಿಸುವ ಈ ಕಾರ್ಯಕ್ರಮ ನಿಜಕ್ಕೂ ಎಲ್ಲರ ಭಾವನಾಲೋಕದಲ್ಲೊಮ್ಮೆ ಸುತ್ತಿ ಕಣ್ಣಂಚಲ್ಲಿ ನೀರು ತರಿಸುವುದಂತೂ ಸತ್ಯ.

ಯಾವುದರಲ್ಲಿ ಜೀವನದ ಸೌಂದರ್ಯವಿದೆ ಎಂದು ಪರಿಚಯಿಸುವ ಈ ಕಾರ್ಯಕ್ರಮಕ್ಕೆ ನಾವೆಲ್ಲರೂ ಸಾಕ್ಷಿಯಾಗೋಣ. ಪರಮಪೂಜ್ಯ ತ್ರಿವಿಧ ದಾಸೋಹಿ ಜಗದ್ಗುರು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಿಎ ಸುರೇಶ್ ಚನ್ನಿಯವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಚಿವ ಡಾ. ಎಚ್.ಕೆ. ಪಾಟೀಲರು ಆಗಮಿಸುತ್ತಿದ್ದಾರೆ. ಸಂಸದ ಬಸವರಾಜ್ ಬೊಮ್ಮಾಯಿ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕ ಡಿ.ಆರ್. ಪಾಟೀಲ್ ಮುಖ್ಯ ಅತಿಥಿಗಳಾಗಿ ಆಗಮಿಸುತ್ತಿದ್ದಾರೆ.

ಅತಿಥಿಗಳಾಗಿ ಮನೋರಮಾ ಕಾಲೇಜಿನ ಪ್ರಾಚಾರ್ಯ ಪ್ರೊ. ಬಿ.ಎಸ್. ಹಿರೇಮಠ್, ಮುನ್ಸಿಪಲ್ ಪದವಿಪೂರ್ವ ಮಹಾವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಪ್ರೊ. ಎಸ್.ವಿ. ನಾರಾಯಣಪುರ ಆಗಮಿಸಲಿದ್ದಾರೆ. ಇಂತಹ ಅಪರೂಪದ ಕಾರ್ಯಕ್ರಮಕ್ಕೆ ಮೂರಶಿಳ್ಳಿನ ಬಂಧುಗಳು ಎಲ್ಲ ಸ್ನೇಹಿತರನ್ನು, ಹಿತೈಷಿಗಳನ್ನು ಮನಃಪೂರ್ವಕವಾಗಿ ಆಹ್ವಾನಿಸಿದ್ದಾರೆ. ಬನ್ನಿ, ಇವರ ಇಡೀ ಬದುಕನ್ನೊಮ್ಮೆ ಅವಲೋಕಿಸುವ ಈ ಸಂದರ್ಭದಲ್ಲಿ ಈ ಹಿರಿಯರ ಕಾರ್ಯಕ್ರಮ ನಮಗೆ ಸ್ಫೂರ್ತಿಯಾಗಲಿದೆ. ಈ ಮಹನೀಯರ ಆಶೀರ್ವಾದವನ್ನು ಪಡೆಯೋಣ.



**– ಸುಧಾ ಹುಚ್ಚಣ್ಣವರ. ಉಪನ್ಯಾಸಕರು, ಗದಗ.**

### ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಸಂಭ್ರಮದ ಕನ್ನಡ ಹಬ್ಬ

# ಕನ್ನಡದ ಅಂತಃಸತ್ವ ಹೆಚ್ಚಿಸೋಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದಿನವೂ ಮೊಬೈಲ್, ಕಂಪ್ಯೂಟರ್, ಪ್ರಾಯೋಗಿಕ ತರಗತಿ, ಕ್ಲಾಸ್‌ರೂಂನಲ್ಲಿ ಇಂಗ್ಲೀಷ್ ಭಾಷೆಯೊಂದಿಗೆ ಸಂವಹನ-ಶಿಕ್ಷಣ ಹೊಂದುವ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಶುಕ್ರವಾರ ಬಿಳಿ ಶರ್ಟ್, ಧೋತಿ, ಜುಬ್ಬಾ-ಪೈಜಾಮ್ ಮತ್ತು ಕೊರಳಲ್ಲಿ ಹಳದಿ-ಕೆಂಪಿನ ಕನ್ನಡದ ಶಾಲು, ಇನ್ನು ವಿದ್ಯಾರ್ಥಿನಿಯರು ಗ್ರಾಮೀಣ ಶೈಲಿಯ ಇಳಕಲ್, ಶಿಗ್ಲಿ ಸೀರೆ ಕುಪ್ಪಸ ತೊಟ್ಟು ಕನ್ನಡದ ಜಾನಪದ ಹಾಡುಗಳಿಗೆ ಕುಣಿದು ಕುಪ್ಪಳಿಸಿ ಸಂಭ್ರಮದಿಂದ ಕನ್ನಡದ ಹಬ್ಬ ಆಚರಿಸಿದರು.

ಈ ಸಂಭ್ರಮ ಕಂಡುಬಂದಿದ್ದು, ಲಕ್ಷ್ಮೇಶ್ವರದ ಅಗಡಿ ಇಂಜಿನಿಯರಿಂಗ್ ಕಾಲೇಜಿನ ಕ್ಯಾಂಪಸ್‌ನಲ್ಲಿ. ಕರ್ನಾಟಕ ರಾಜ್ಯೋತ್ಸವ ಹಾಗೂ ಅಗಡಿ ಕನ್ನಡ ಸಂಘದ 10ರ ಸಂಭ್ರಮದ ಅಂಗವಾಗಿ ಪಿಯುಸಿ ಮತ್ತು ಇಂಜಿನಿಯರಿಂಗ್ ಕಾಲೇಜಿನ ಎಲ್ಲ ವಿಭಾಗದ ವತಿಯಿಂದ ಕೈಗೊಂಡ ಅಗಡಿ ಕನ್ನಡ ಹಬ್ಬ ವಿದ್ಯಾರ್ಥಿಗಳಲ್ಲಿ ಸಂಭ್ರಮವನ್ನು ಮೂಡಿಸಿತು. ಕಾಲೇಜಿನೆಲ್ಲೆಡೆ ಕನ್ನಡದ ಬಾವುಟಗಳು ರಾರಾಜಿಸಿ ಕನ್ನಡ ಕಂಪು ಮೇಳೈಸಿತ್ತು. ಕನ್ನಡ ಹಬ್ಬದ ನಿಮಿತ್ತ ಒಂದು ವಾರ ಮೊದಲೇ ವಿವಿಧ ವಿಭಾಗಗಳ ವಿದ್ಯಾರ್ಥಿಗಳಿಂದ ಕನ್ನಡ ಕುರಿತ ಪ್ರಬಂಧ, ಚರ್ಚಾಸ್ಪರ್ಧೆ, ನೃತ್ಯ, ಹಾಡು, ಸಂಗೀತ, ಚಿತ್ರಕಲಾ ಸ್ಪರ್ಧೆ ಏರ್ಪಡಿಸಲಾಗಿತ್ತು. ಶುಕ್ರವಾರ



ನಡೆದ ಕನ್ನಡ ಹಬ್ಬ ಕಾರ್ಯಕ್ರಮದಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಸಾಪ ಶಿಗ್ಲಿ ಹೋಬಳಿ ಘಟಕದ ಅಧ್ಯಕ್ಷ ರಾಜು ರಜಪೂತ ಕನ್ನಡ ಹಬ್ಬದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕನ್ನಡ ಭಾಷೆಗೆ 2 ಸಾವಿರ ವರ್ಷಗಳ ಇತಿಹಾಸವಿದೆ. ಕನ್ನಡನಾಡು ಕಲೆ, ಭಾಷೆ, ಸಂಸ್ಕೃತಿಗೆ ತನ್ನದೇ ಅದ ಕೊಡುಗೆ ನೀಡಿದೆ. ಎಂಟು ಜ್ಞಾನಪೀಠ ಪ್ರಶಸ್ತಿ ನೀಡಿದ ಭಾಷೆ ನಮ್ಮದು. ಇಂದಿನ ಮಾಹಿತಿ-ತಂತ್ರಜ್ಞಾನ ಯುಗದಲ್ಲಿ ಇಂಗ್ಲೀಷ್ ಸೇರಿ ಇತರೇ ಭಾಷೆಗಳ ಜ್ಞಾನ ಅಗತ್ಯ. ಆದರೆ ಕನ್ನಡ ತಾಯಿಯ ಮಕ್ಕಳಾದ ನಾವೆಲ್ಲ ಕನ್ನಡ ನಾಡಿನ ಜವಾಬ್ದಾರಿಯುತ ಪ್ರಜೆಗಳಾಗಿ ಕನ್ನಡದಲ್ಲೇ ಮಾತನಾಡುತ್ತೇನೆ, ಬರೆಯುತ್ತೇನೆ, ನಿತ್ಯ ವ್ಯವಹಾರದಲ್ಲಿ ಕನ್ನಡವನ್ನೇ ಬಳಸುತ್ತೇನೆ, ಕನ್ನಡೇತರರಿಗೆ ಕನ್ನಡ ಕಲಿಸುತ್ತೇನೆ, ಕನ್ನಡ ನುಡಿ, ಸಂಸ್ಕೃತಿ, ಪರಂಪರೆ ಉಳಿಸಲು ಸದಾ ಕಟಿಬದ್ಧರಾಗೋಣ ಮತ್ತು ಕನ್ನಡದ ಅಂತಃಸತ್ವವನ್ನು ಹೆಚ್ಚಿಸುವ ಸಂಕಲ್ಪ ಮಾಡೋಣ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ವಹಿಸಿದ್ದರು. ಅಗಡಿ ಸನ್‌ರೈಸ್ ಆಸ್ಪತ್ರೆಯ ಡಾ. ರಾಜಶೇಖರ ಮೂಲಿಮನಿ, ಡಾ. ಎನ್.ಹಯವದನ, ಡಾ. ಆರ್.ಎಂ. ಪಾಟೀಲ, ಡಾ. ಸುಭಾಷ್ ಮೇಟಿ, ಪ್ರೊ. ವಿಕ್ರಮ ಶಿರೋಳ, ಡಾ. ಗಿರೀಶ ಯತ್ತಿನಹಳಿ, ಕನ್ನಡ ಹಬ್ಬದ ಸಂಯೋಜಕ ಪ್ರೊ. ಸೋಮಶೇಖರ ಕೆರಿಮನಿ ಸೇರಿ ಕಾಲೇಜಿನ ಪ್ರಾಧ್ಯಾಪಕ ವೃಂದ, ಸಿಬ್ಬಂದಿ, ವಿದ್ಯಾರ್ಥಿಗಳಿದ್ದರು. ಪ್ರೊ. ಪ್ರತಿಮಾ ಮಹಾಪುರುಷ ಸ್ವಾಗತಿಸಿದರು, ಮೇಘಾ ಪಾಶೆಟ್ಟಿ, ತಸ್ಲೀಮಾ ಕಾರಡಗಿ, ಪ್ರೊ. ರಾಜೇಶ್ವರಿ ಗಾಮನಗಟ್ಟಿ, ಪ್ರೊ. ಷಣ್ಮುಖ ಜಿ, ಪ್ರೊ. ರಾಜೇಂದ್ರ ಶೆಟ್ಟರ್ ನಿರೂಪಿಸಿದರು.

ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಪ್ರತಿವರ್ಷ ಕನ್ನಡ ರಾಜ್ಯೋತ್ಸವದ ಅಂಗವಾಗಿ ವಿಶೇಷ ಕಾರ್ಯಕ್ರಮಗಳ ಮೂಲಕ ಕಾಲೇಜಿನಲ್ಲಿ ಕನ್ನಡದ ಕಂಪನ್ನು ಪಸರಿಸುತ್ತಾರೆ. ಇಂಗ್ಲೀಷ್ ಸೇರಿ ಇತರೇ ಭಾಷೆಗಳ ಜ್ಞಾನ ಅವಶ್ಯವಾಗಿದ್ದರೂ ಅವರಲ್ಲಿನ ತಾಯಿ ಭಾಷೆ ಕನ್ನಡದ ಪ್ರೇಮ, ಅಭಿಮಾನ, ಸ್ವಾಭಿಮಾನ, ಉತ್ಸಾಹ ಕಾಲೇಜಿನ ಕ್ಯಾಂಪಸ್‌ನಲ್ಲಿ ನಿತ್ಯೋತ್ಸವವನ್ನುಂಟು ಮಾಡುತ್ತದೆ.

**– ಡಾ.ಪರಶುರಾಮ ಬಾರಕಿ, ಪ್ರಾಚಾರ್ಯರು.**

**ಪ್ರೊ. ಸೋಮಶೇಖರ ಕೆರಿಮನಿ, ಕನ್ನಡ ಪ್ರಾಧ್ಯಾಪಕರು.**










### ಡಾ. ಎಂ.ಎಂ. ಕಲಬುರ್ಗಿ ಅವರ 86ನೇ ಜನ್ಮ ದಿನಾಚರಣೆ, ರಾಷ್ಟ್ರೀಯ ಪ್ರಶಸ್ತಿ ಪ್ರದಾನ

# ಡಾ. ಕಲಬುರ್ಗಿಯವರದು ಶ್ರೇಷ್ಠ ವ್ಯಕ್ತಿತ್ವ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಲಬುರ್ಗಿಯವರ ಶ್ರೇಷ್ಠತೆ ಇರುವುದು ಕೇವಲ ಅವರು ಹಿರಿಯ ಸಂಶೋಧಕರಾಗಿದ್ದರು ಎಂಬುವುದಕ್ಕಲ್ಲ. ಅವರು ಸೃಜನಶೀಲ ಬರಹಗಾರರಾಗಿದ್ದರು ಎಂಬ ಕಾರಣಕ್ಕೂ ಅಲ್ಲ. ಅದಕ್ಕಿಂತ ಅವರಲ್ಲಿದ್ದ ಮಾನವೀಯ ಅಂತಃಕರಣ ಎಂಬುದು ಅವರ ಶ್ರೇಷ್ಠತೆಯನ್ನು ಎತ್ತಿ ತೋರಿಸುತ್ತದೆ. ನಾವು ಮಾಡುವ ಕೆಲಸದಲ್ಲಿ ನಿಷ್ಠೆ ಇಲ್ಲದಿದ್ದರೆ ನಮ್ಮ ಬದುಕು ಶೃತಿ ಕೆಟ್ಟ ಸಂಗೀತವಾಗುತ್ತದೆ ಎಂದು ಹೇಳುತ್ತಿದ್ದರು. ಸಂಗೀತ ಮತ್ತು ಅಧ್ಯಯನದಲ್ಲಿ ಯಾವುದೇ ರೀತಿಯ ಅಡೆತಡೆಗಳು ಬರದಂತೆ ಎಚ್ಚರ ವಹಿಸಿದ ವ್ಯಕ್ತಿ ನಮ್ಮ ಕಲಬುರ್ಗಿಯವರು ಎಂದು ನಾಡೋಜ ಗೊ.ರು. ಚನ್ನಬಸಪ್ಪ ಹೇಳಿದರು.

ಅವರು ಗುರುವಾರ ಡಾ. ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ವತಿಯಿಂದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಿದ್ದ ಡಾ. ಎಂ.ಎಂ. ಕಲಬುರ್ಗಿ




ಅವರ 86ನೇ ಜನ್ಮ ದಿನಾಚರಣೆ, ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಮತ್ತು ಗ್ರಂಥ ಬಿಡುಗಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕಲಬುರ್ಗಿ ಅವರು ಯಾವುದೇ ಕೊರತೆ, ಹಸಿವು, ನಿದ್ದೆಗಳ ಹಂಗಿಲ್ಲದೆ ಕೆಲಸ ಮಾಡುವ ವ್ಯಕ್ತಿಯಾಗಿದ್ದರು. ಲೋಕವ್ಯವಹಾರದಲ್ಲಿ ಸಮಗ್ರ ನೋಟ, ಸಮಗ್ರ ವರದಿ, ಸಮಗ್ರ ವ್ಯಕ್ತಿತ್ವ ಎಂಬ ಇಂತಹ ಪದಗಳನ್ನು ಬಳಸುತ್ತೇವೆ. ವ್ಯಕ್ತಿಗತವಾಗಿ ಅನ್ವಯಿಸುವುದಾದರೆ ಅದು ನಮ್ಮ ನೆಚ್ಚಿನ ಸಾಹಿತಿಗಳಾದ ಡಾ. ಎಂ.ಎಂ ಕಲಬುರ್ಗಿ ಅವರಿಗೆ ಅನ್ವಯಿಸುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಬೆಳಗಾವಿ ವಿಭಾಗದ ಜಂಟಿ ನಿರ್ದೇಶಕ ಕೆ.ಎಚ್. ಚನ್ನೂರ, ಡಾ. ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ಅಧ್ಯಕ್ಷ ವೀರಣ್ಣ ರಾಜೂರ, ಉಮಾದೇವಿ ಎಂ.ಕಲಬುರ್ಗಿ ಉಪಸ್ಥಿತರಿದ್ದರು.

ಡಾ. ಎಂ.ಎಂ. ಕಲಬುರ್ಗಿ ಪ್ರತಿಷ್ಠಾನದ ಸದಸ್ಯ ಶಶಿಧರ ತೊಡಕರ ಅತಿಥಿಗಳ ಪರಿಚಯ ಮಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿದರು. ಡಾ. ಈರಣ್ಣ ಇಂಜಗನೇರಿ ಕಾರ್ಯಕ್ರಮ ನಿರೂಪಿಸಿದರು. ಡಾ. ಎಂ.ಎಂ. ಕಲಬುರ್ಗಿ ಪ್ರತಿಷ್ಠಾನದ ಸದಸ್ಯ ಡಾ. ಬಾಳಣ್ಣ ಶೀಗಿಹಳ್ಳಿ ವಂದಿಸಿದರು.

ಡಾ. ಎಂ.ಎಂ. ಕಲಬುರ್ಗಿ ವಚನ ಸಂಗೀತ ಪ್ರಶಸ್ತಿ ಪುರಸ್ಕೃತ ಡಾ. ಶರಣಬಸಪ್ಪ ಮೇಡೆದಾರ ಮಾತನಾಡಿ, ಡಾ. ಎಂ.ಎಂ. ಕಲಬುರ್ಗಿ ಹೆಸರಿನ ಪ್ರಶಸ್ತಿ ಪಡೆದಿರುವುದು ಸಂತಸ ತಂದಿದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚು ಹೆಚ್ಚು ಶರಣರ ವಚನಗಳು ಮತ್ತು ಸಾಹಿತ್ಯವನ್ನು ಉತ್ತಮವಾಗಿ ನಿಮ್ಮ ಮುಂದೆ ಹಾಡುತ್ತೇನೆ. ಸಾಹಿತ್ಯವನ್ನು ವಿದ್ಯಾರ್ಥಿಗಳಿಗೆ ಸ್ವತಃ ನಾನೇ ಬರೆದು ಕಲಿಸುತ್ತೇನೆ ಎಂದು ಹೇಳಿದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ವಚ್ಛ ಭಾರತ ಮಿಷನ ಯೋಜನೆ 2.0 ಯೋಜನೆಯಡಿಯಲ್ಲಿ ವೈಯಕ್ತಿಕ ಶೌಚಾಲಯ ನಿರ್ಮಾಣ ಮಾಡಲು ಫಲಾನುಭವಿಗಳಿಗೆ ಪಟ್ಟಣ ಪಂಚಾಯತಿ ವತಿಯಿಂದ ವಂತಿಕೆ ನೀಡಲಾಗುವುದು.

2024–25 ನೇ ಸಾಲಿನಲ್ಲಿ ಎಸ್ ಎಫ್.ಸಿ ಅನುದಾನ ( ಇತರೆ ಬಡಜನರ ಕಲ್ಯಾಣಕ್ಕಾಗಿ ) ಬಿಪಿಎಲ್ ಕುಟುಂಬದವರು 7.25 % , ಎಸ್ ಎಫ್ ಸಿ ಅನುದಾನ ಹಾಗೂ ಪಟ್ಟಣ ಪಂಚಾಯತಿ ನಿಧಿ ವಿಕಲಚೇತನರಿಗಾಗಿ 5 % , ಪಟ್ಟಣ ಪಂಚಾಯತಿ ನಿಧಿ ಪರಿಶಿಷ್ಟ ಜಾತಿ ಫಲಾನುಭವಿಗಳಿಗೆ ಮಾತ್ರ 24. 10 % ಯೋಜನೆಯಡಿ, ಪಟ್ಟಣ ಪಂಚಾಯತಿ ನಿಧಿ ಪರಿಶಿಷ್ಟ ಪಂಗಡ ಫಲಾನುಭವಿಗಳಿಗೆ ಮಾತ್ರ ಈ ಯೋಜನೆಯ ಸೌಲಭ್ಯಕ್ಕಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

## ಇಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಮದುತ್ತರಾಧಿ ಮಠಾಧೀಶ ಶ್ರೀಶ್ರೀ 1008 ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರು ಡಿ.16ರಿಂದ 18ರವರೆಗೆ ಮೂರು ದಿನಗಳ ಕಾಲ ನಗರದಲ್ಲಿ ವಾಸ್ತವ್ಯವಿರಲಿದ್ದು, ಶ್ರೀಗಳ ಸ್ವಾಗತ ಕುರಿತು ಪೂರ್ವಭಾವಿಯಾಗಿ ಚರ್ಚಿಸಲು ನ. 30ರ ಸಾಯಂಕಾಲ 6 ಗಂಟೆಗೆ ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಸದ್ಭಕ್ತರ ಸಭೆ ಕರೆಯಲಾಗಿದೆ. ಸರ್ವರೂ ಸಭೆಯಲ್ಲಿ ಪಾಲ್ಗೊಳ್ಳುವಂತೆ ಶ್ರೀ ವಿಶ್ವಮಧ್ವ ಮಹಾಪರಿಷತ್ ಗದಗ ಶಾಖೆ ವತಿಯಿಂದ ಪಂ. ವರದಾಚಾರ್ಯ ಜಾಲಿಹಾಳ ಅವರು ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.

### ಭಗವದ್ಗೀತಾ ಪ್ರವಚನದ ಸಮಾರೋಪದಲ್ಲಿ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

## ತಾತ್ವಿಕ ಚಿಂತನೆಯಿಂದ ಬದುಕು ಸಾರ್ಥಕ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಾಚೀನ ಕಾಲದಿಂದಲೂ ಭಾರತೀಯರು ತಾತ್ವಿಕ ಚಿಂತನೆಗೆ ಹೆಸರಾಗಿದ್ದು, ತಾತ್ವಿಕ ಚಿಂತನೆಯಿಂದ ಬದುಕಿನ ಸಾರ್ಥಕತೆಯನ್ನು ಕಂಡುಕೊಳ್ಳಲು ಸಾಧ್ಯವಿದೆ ಎಂದು ತೋಂಟ–ದಾರ್ಯ ಸಂಸ್ಥಾನಮಠದ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಅವರು ಇಲ್ಲಿನ ಕುಮಾರವ್ಯಾಸ ಪ್ರವಚನ ಸಂಚಾಲನ ಸಮಿತಿ ಏರ್ಪಡಿಸಿರುವ ಭಗವದ್ಗೀತಾ ಪ್ರವಚನದ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡುತ್ತಿದ್ದರು.

ಕಳೆದ ಎರಡು ವಾರಗಳಿಂದ ಇಲ್ಲಿ ಡಾ. ಪಾವಗಡ ಪ್ರಕಾಶ್ ರಾವ್ ಅವರು ಅತ್ಯಂತ ಅರ್ಥಪೂರ್ಣವಾಗಿ ಭಗವದ್ಗೀತಾ ಪ್ರವಚನ ನಡೆಸಿಕೊಟ್ಟಿದ್ದು, ಕೇಳುಗರು ಪ್ರವಚನದಲ್ಲಿನ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಭಗವದ್ಗೀತೆಯು ಅತ್ಯಂತ ವಿಶಿಷ್ಟವಾದ ಗ್ರಂಥವಾಗಿದ್ದು, ನೂರಾರು ಜನರು ಭಗವದ್ಗೀತೆಗೆ ವ್ಯಾಖ್ಯಾನ ಬರೆದಿದ್ದಾರೆ. ಕುರುಕ್ಷೇತ್ರ ಯುದ್ಧದ ಸಮಯದಲ್ಲಿ ಕೃಷ್ಣ ಮತ್ತು ಅರ್ಜುನರ ನಡುವಿನ ಸಂವಾದೋಪಾದಿ ಸಂಭಾಷಣೆಯಲ್ಲಿ ಕೃಷ್ಣ



ಅರ್ಜುನನ ಪ್ರಶ್ನೆಗಳಿಗೆ ಉತ್ತರ ನೀಡಿದ್ದರೂ ಸಹ ಅವು ಜನರಲ್ಲಿ ಮೂಡುವ ಗೊಂದಲಗಳೇ ಆಗಿವೆ. ಅತ್ಯಂತ ನಿಷ್ಕಲ್ಮಶವಾದ ಪ್ರೀತಿಯೇ ಭಕ್ತಿಯಾಗಿದ್ದು, ಪ್ರವಚನದಂಥ ಅನುಭಾವದಲ್ಲಿ ಪಾಲ್ಗೊಳ್ಳುವುದರಿಂದ ಮನಸ್ಸಿನ ಮೈಲಿಗೆ ಕಳೆದುಕೊಳ್ಳಬಹುದು ಎಂದರು.

ಪ್ರವಚನ ಮಾಲಿಕೆಯ ಕೊನೆಯ ದಿನದ ಪ್ರವಚನ ನೀಡಿದ ಡಾ.ಪಾವಗಡ ಪ್ರಕಾಶ್ ರಾವ್ ಮಾತನಾಡಿ, ಭಗವದ್ಗೀತೆಯ ಕುರಿತ ತಾತ್ವಿಕ ಚಿಂತನೆ ಅರ್ಥಮಾಡಿಕೊಳ್ಳಲು ಕಷ್ಟ. ಆದಾಗ್ಯೂ ಪ್ರವಚನಕ್ಕೆ ಅಭೂತಪೂರ್ವ ಸ್ಪಂದನೆ ಸಿಕ್ಕಿದೆ. ಉಪನಿಷತ್ತುಗಳಲ್ಲಿ ಬ್ರಹ್ಮನ್ ಎಂಬ ಮಹಾನ್ ಪರಿಕಲ್ಪನೆಯ ವಿವರಣೆ ಇದ್ದು, ಬ್ರಹ್ಮನ್ ಎಂದರೆ ಇಡೀ ಬ್ರಹ್ಮಾಂಡವನ್ನೇ ವ್ಯಾಪಿಸಿರುವ ನಿರಾಡಂಬರ ತತ್ವ. ನದಿಗಳು ನೂರಾರಿದ್ದರೂ ಜಲ ಒಂದೇ. ಅದೇ ರೀತಿ ಕೋಟ್ಯಂತರ ಆತ್ಮಗಳು ಇದ್ದರೂ ಅವೆಲ್ಲ 'ಬ್ರಹ್ಮನ್' ಶಕ್ತಿಯ ಕಿರಣಗಳಾಗಿವೆ.

ಚಿನ್ನದ ಗಟ್ಟಿಯಿಂದ ನೂರಾರು ಆಭರಣಗಳನ್ನು ತಯಾರಿಸುತ್ತೇವೆ. ಅದೇ ರೀತಿ ಪರಮಾನಂದ ಪರಬ್ರಹ್ಮ ಸ್ವರೂಪವನ್ನು ನಾವು ಶಿವ, ಶಂಕರ, ವಿಷ್ಣು, ರಾಮ ಹೀಗೆ ದೇವತೆಗಳ ಹೆಸರಿನಿಂದ ಆರಾಧನೆ ಮಾಡುತ್ತೇವೆ. ಈ ಪ್ರವಚನ ಮಾಲಿಕೆಯಲ್ಲಿ ಭಗವದ್ಗೀತೆಯ ಪೀಠಿಕೆ ಕುರಿತು ವಿವರಣೆ ನೀಡಿದ್ದು, ಮುಂದಿನ ದಿನಗಳಲ್ಲಿ ಸಂಚಾಲನಾ ಸಮಿತಿಯವರು ಮತ್ತೊಮ್ಮೆ ಪ್ರವಚನ ಏರ್ಪಡಿಸಿದರೆ ಭಗವದ್ಗೀತೆಯ ಸಂಪೂರ್ಣ ದರ್ಶನ ಮಾಡಿಸಲು ಪ್ರಯತ್ನಿಸುವುದಾಗಿ ತಿಳಿಸಿದರು.

ಪ್ರವಚನದ ಯಶಸ್ಸಿಗೆ ಸಹಕರಿಸಿದವರನ್ನು ಸಂಮಾನಿಸಲಾಯಿತು. ಪ್ರವಚನ ಸಂಚಾಲನ ಸಮಿತಿ ಅಧ್ಯಕ್ಷರಾದ ಎಸ್.ಎಸ್. ಶೆಟ್ಟರ್ ಮಾತನಾಡಿದರು. ಮಾಜಿ ಶಾಸಕ ಡಿ.ಆರ್. ಪಾಟೀಲ, ಜಿ.ಬಿ. ಪಾಟೀಲ, ಅನಿಲ ವೈದ್ಯ, ವಾದಿರಾಜ ರಾಯ್ಕರ, ಡಾ. ಎಸ್.ಡಿ. ಯರಿಗೇರಿ, ಡಾ. ವಿಜಯದತ್ತ ಮಂಗಸೂಳಿ, ಗೋಪಾಲಕೃಷ್ಣ ತಾಸಿನ, ಶಶಿಧರ ಮೂರಶಿಳ್ಳಿನ, ಅನಿಲ ತೆಂಬದಮನಿ, ಗೌರಪ್ಪ ಬೊಮ್ಮಣ್ಣನವರ, ಬಿ.ವಿ. ಹಿರೇಮಠ, ಡಾ. ದತ್ತಪ್ರಸನ್ನ ಪಾಟೀಲ ಸೇರಿದಂತೆ ಅನೇಕ ಭಕ್ತರು ಭಾಗವಹಿಸಿದ್ದರು.

## ಪಾಲಕ–ಶಿಕ್ಷಕರು ಸಮಾನ ಜವಾಬ್ದಾರರು

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬ ಮಕ್ಕಳು ಸಮಾಜದಲ್ಲಿ ಸುಸ್ಕೃಂತರಾಗಿ, ವಿದ್ಯಾವಂತರಾಗಿ ಹಾಗೂ ತಮ್ಮ ಸ್ವಾಭಿಮಾನದ ಬದುಕನ್ನು ನಿರ್ಮಿಸಿಕೊಳ್ಳಲು ಕೇವಲ ಶಿಕ್ಷಕರಷ್ಟೇ ಅಲ್ಲದೆ ಪಾಲಕರೂ ಜವಾಬ್ದಾರರು ಎಂದು ಸ್ಥಳಿಯ ಕೆಎಲ್‌ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎ.ಕೆ. ಮಠ ಅಭಿಪ್ರಾಯಪಟ್ಟರು.



ಮಹಾವಿದ್ಯಾಲಯದಲ್ಲಿ ಪಾಲಕರ ಹಾಗೂ ಹಳೆಯ ವಿದ್ಯಾರ್ಥಿಗಳ ಸಭೆಯನ್ನುದ್ದೇಶಿ ಅವರು ಮಾತನಾಡುತ್ತ, ಒಂದು ಸಂಸ್ಥೆಯು ಬೆಳವಣಿಗೆ ಸಾಧಿಸಲು ಹಳೆಯ ವಿದ್ಯಾರ್ಥಿಗಳ ಸಲಹೆ, ಸಹಕಾರ ಅವಶ್ಯಕವಾಗಿದ್ದು, ಇಂತಹ ಸಭೆಗಳನ್ನು ಹಮ್ಮಿಕೊಂಡಾಗ ವಿದ್ಯಾರ್ಥಿಗಳು ಮತ್ತು ಪಾಲಕರು ತಮ್ಮ ಸಲಹೆ–ಸೂಚನೆಗಳನ್ನು ನೀಡುವದರಿಂದ ವಿದ್ಯಾರ್ಥಿಗಳ ಮತ್ತು ಸಂಸ್ಥೆಯ ಪ್ರಗತಿಗೆ ಸಹಾಯಕವಾಗುತ್ತದೆ ಎಂದರು.

ಪಾಲಕರ ಪ್ರತಿನಿಧಿಯಾಗಿ ಮಾತನಾಡಿದ ಎಚ್.ಎಚ್. ಕೊಪ್ಪಳ, ಪಾಲಕರು ತಮ್ಮ ಮಕ್ಕಳಿಗೆ ವಿದ್ಯೆ ಕೊಡಿಸಿ ಅವರನ್ನು ಸಮಾಜದಲ್ಲಿ ಸ್ವಾವಲಂಬಿಗಳನ್ನಾಗಿ ಮಾಡಬೇಕು. ಅದರಲ್ಲಿಯೂ ಹೆಣ್ಣ ಮಕ್ಕಳು ತಮ್ಮ ಜೀವನದಲ್ಲಿ ಸ್ವತಂತ್ರವಾಗಿ ಬದಕಲು ಉನ್ನತ ಶಿಕ್ಷಣ ಕೊಡಿಸುವದು ಅವರ ಪಾಲಕರ ಜವಾಬ್ದಾರಿಯಾಗಿದ್ದು, ಅಂತಹ ಜವಾಬ್ದಾರಿಯಿಂದ ಯಾವ ಪಾಲಕರೂ ಹಿಂಜರಿಯಬಾರದು ಎಂದು ಕಿವಿಮಾತು ಹೇಳಿದರು.

ಹಳೆಯ ವಿದ್ಯಾರ್ಥಿಗಳ ಪ್ರತಿನಿಧಿಯಾಗಿ ಮಾತನಾಡಿದ ಸಂತೋಷ ಕಿತ್ತೂರ, ಈ ಮಹಾವಿದ್ಯಾಲಯದಲ್ಲಿ ಎಲ್ಲಾ ಸೌಲಭ್ಯಗಳು ಇದ್ದು, ಅವುಗಳನ್ನು ಸದುಪಯೋಗಪಡಿಸಿಕೊಂಡ ವಿದ್ಯಾರ್ಥಿಗಳು ಸಮಾಜದಲ್ಲಿ ಉತ್ತಮ ಜೀವನ ಕಟ್ಟಿಕೊಳ್ಳಬಹುದು. ಈ ಮಹಾವಿದ್ಯಾಲಯದ ಪ್ರಾಧ್ಯಾಪಕರು ವಿದ್ಯಾರ್ಥಿಗಳನ್ನು ತಮ್ಮ ಮಕ್ಕಳಂತೆ ಕಾಣುತ್ತಾರೆ. ಅದ್ದರಿಂದ ಈ ಮಹಾವಿದ್ಯಾಲಯದಲ್ಲಿ ವ್ಯಾಸಾಂಗ ಮಾಡುವದು ಒಂದು ಪುಣ್ಯ ಎಂದು ತಮ್ಮ ಹಿಂದಿನ ದಿನಗಳನ್ನು ನೆನೆದರು.

ಸೊನಿಯಾ ಗೋಡಕೆ ಪ್ರಾರ್ಥಿಸಿದರು. ಹಳೆಯ ವಿದ್ಯಾರ್ಥಿ ಸಂಘದ ಸಂಯೋಜಕರಾದ ವೀಣಾ ತಿರ್ಲಾಪೂರ ಸ್ವಾಗತಿಸಿದರು. ಮಹಾವಿದ್ಯಾಲಯದ ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ.ವಿಠಲ ಕೋಳಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ರಾಜ್ಯಶಾಸ್ತ್ರ ಪ್ರಾಧ್ಯಾಪಕ ಚಂದಲಿಂಗಪ್ಪ ಹಳ್ಳಿಕೇರಿ ನಿರೂಪಿಸಿದರು. ಪಾಲಕರ ಸಂಘದ ಸಂಯೋಜಕರಾದ ಆಯ್.ಬಿ. ಪಾಟೀಲ ವಂದಿಸಿದರು.

## ಶಸಾಪ ದಿಂದ ಗೊರುಚ ಅವರಿಗೆ ಗೌರಾರ್ಪಣೆ



■ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ

ಮಂಡ್ಯದಲ್ಲಿ ಜರಗಲಿರುವ 87ನೇ ಕನ್ನಡ ಸಾಹಿತ್ಯ ಸಮ್ಮೇಳನದ ನಿಯೋಜಿತ ಸರ್ವಾಧ್ಯಕ್ಷ ಗೊ. ರು. ಚನ್ನಬಸಪ್ಪ ಅವರಿಗೆ ಶರಣ ಸಾಹಿತ್ಯ ಪರಿಷತ್ತಿನ ಅಣ್ಣಿಗೇರಿ ತಾಲೂಕು ಘಟಕದ ಸದಸ್ಯರು ಧಾರವಾಡದ ರಂಗಾಯಣದಲ್ಲಿ ಸನ್ಮಾನಿಸುವ ಮೂಲಕ ತಮ್ಮ ಗೌರಾರ್ಪಣೆ ಸಲ್ಲಿಸಿದರು.

ಶರಣ ಸಾಹಿತ್ಯ ಪರಿಷತ್ ಅಣ್ಣಿಗೇರಿ ತಾಲೂಕು ಘಟಕದ ಅಧ್ಯಕ್ಷ ಎನ್.ಎಂ. ಯಲಬುರ್ಗಿ ಅವರ ನೇತೃತ್ವದಲ್ಲಿ ನಡೆದ ಈ ಸನ್ಮಾನದಲ್ಲಿ ವೀರೇಶ ಶಾನುಭೋಗರ, ಪಿ.ಕೆ. ಕೊಕಾಟೆ, ಅರುಣಕುಮಾರ ಹೂಗಾರ, ಪ್ರೊ. ಸಿ.ಎಸ್. ಹೊಸಮಠ, ಈಶ್ವರಚಂದ್ರ ಹೊಸಮನಿ, ಪಿ..ಎಚ್. ನೀರಲಕೇರಿ, ವೀರಣ್ಣ ರಾಜೂರ, ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷ ಪ್ರೊ. ಸಂಗಮನಾಥ ಲೋಕಾಪುರ ಜೊತೆಗೆ ನವಲಗುಂದ ತಾಲೂಕ ಘಟಕದ ಪದಾಧಿಕಾರಿಗಳು ಹಾಜರಿದ್ದರು

## ವಿದ್ಯಾರ್ಥಿಗಳಿಂದ ರಕ್ತದಾನ ಶಿಬಿರ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆ ಪದವಿ ಕಲಾ ಮಹಾವಿದ್ಯಾಲಯದಲ್ಲಿ ಗುರುವಾರ ಎನ್‌ಸಿಸಿ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳಿಂದ ರಕ್ತದಾನ ಶಿಬಿರ ನೆರವೇರಿತು. ಸುಮಾರು 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು ರಕ್ತದಾನ ಮಾಡಿದರು.

ಈ ಸಂದರ್ಭದಲ್ಲಿ ಎನ್‌ಸಿಸಿ 38 ಕರ್ನಾಟಕ ಬಟಾಲಿಯನ್ ಕರ್ನಲ್ ರೂಪೇಂದ್ರ ಸಿಂಗ್ ಮಾತನಾಡಿ, ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್ (ಓಅಅ) ನಮ್ಮ ದೇಶದ ಉತ್ತಮ ನಾಗರಿಕರು ಮತ್ತು ಭವಿಷ್ಯದ ನಾಯಕರಾಗಲು ಯುವ ಯುವಕ–ಯುವತಿಯರಿಗೆ ತರಬೇತಿ ನೀಡಲು ಎನ್‌ಸಿಸಿ ರಾಷ್ಟ್ರೀಯ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತದೆ. ದೇಶದ ಯುವಕರಲ್ಲಿ ಚಾರಿತ್ರ್ಯ, ಒಡನಾಟ, ಶಿಸ್ತು, ನಾಯಕತ್ವ, ಜಾತ್ಯತೀತ ದೃಷ್ಟಿಕೋನ, ಸಾಹಸ ಮನೋಭಾವ ಮತ್ತು ನಿಸ್ವಾರ್ಥ ಸೇವೆಯ ಆದರ್ಶಗಳನ್ನು ಬೆಳೆಸುವುದು ಮುಖ್ಯ ಉದ್ದೇಶವಾಗಿದೆ. ಎನ್‌ಸಿಸಿ ಮುಗಿದ ನಂತರ ಪ್ರತಿಯೊಬ್ಬರೂ ಸೇನೆಯನ್ನು ಸೇರಬೇಕು ಎಂದು ಆಶಿಸಿದರು.

ವೇದಿಕೆಯಲ್ಲಿ ಉಪಸ್ಥಿತರಿದ್ದ ಸುಬೇದಾರ ಮೇಜರ್ ಮಲ್ಲಪ್ಪ ಎನ್‌ಸಿಸಿ ನಡೆದು ಬಂದ ದಾರಿ ಮತ್ತು ಇದರಿಂದ ಜೀವನದಲ್ಲಿ ಆಗುವ ಬದಲಾವಣೆ ಕುರಿತು ವಿವರಿಸಿದರು. ಎನ್‌ಸಿಸಿ ದಿನಾಚರಣೆಯ ಕಾರ್ಯಕ್ರಮವನ್ನು ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರ್ಗಣ್ಣವರ ಉದ್ಘಾಟಿಸಿದರು. ಸಭೆಯ ಅಧ್ಯಕ್ಷತೆಯನ್ನು ಸಂಸ್ಥೆಯ ಪ್ರಾಚಾರ್ಯ ಬಿ.ಎಸ್. ಉಗ್ರದ ವಹಿಸಿ ಮಾತನಾಡಿದರು. ಅತಿಥಿಗಳಾಗಿ ಪ.ಪೂ ಕಾಲೇಜು ಪ್ರಾಚಾರ್ಯ ಎ.ವಾಯ್. ಕಳ್ಳಿಮನಿ, ಹವಾಲ್ದಾರ ಶ್ರೀಕಾಂತ ಎಚ್, ಡಾ. ಮಲ್ಲಿಕಾರ್ಜುನ, ವಿ.ಎನ್. ನಾಗಶೆಟ್ಟಿ, ಎಸ್.ಬಿ. ಪಾಟೀಲ, ಉಪನ್ಯಾಸಕರು ಹಾಗೂ ಸಿಬ್ಬಂದಿಗಳು ಇದ್ದರು. ಅನುಸೂಯಾ ಲಮಾಣಿ ಸ್ವಾಗತಿಸಿ ನಿರೂಪಿಸಿದರು.

## ದ.ರಾ. ಬೇಂದ್ರೆ ಭವನ ಅಭಿವೃದ್ಧಿಪಡಿಸಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕರ್ನಾಟಕ ಪ್ರಜಾಪರ ವೇದಿಕೆ ವತಿಯಿಂದ ಶಿರಹಟ್ಟಿ ಪಟ್ಟಣದಲ್ಲಿಯ ದ.ರಾ. ಬೇಂದ್ರೆ ಅವರ ಭವನವನ್ನು ಅಭಿವೃದ್ಧಿಪಡಿಸಿ ಸಾಂಸ್ಕೃತಿಕ ಚಟುವಟಿಕೆಗಳಿಗೆ ಅವಕಾಶ ಕಲ್ಪಿಸಬೇಕೆಂದು ತಹಸೀಲ್ದಾರರ ಮೂಲಕ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.




ಈ ಸಂದರ್ಭದಲ್ಲಿ ಮಾತನಾಡಿದ ವೇದಿಕೆ ತಾಲೂಕಾಧ್ಯಕ್ಷ ಹಸನ ತಹಸೀಲ್ದಾರ, ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿರುವ ವರಕವಿ ದ.ರಾ .ಬೇಂದ್ರೆ ಅವರ ಸವಿನೆನಪಿಗಾಗಿ ಶಿರಹಟ್ಟಿ ಪಟ್ಟಣದಲ್ಲಿಯ ಹೃದಯಭಾಗದಲ್ಲಿ ನಿರ್ಮಿಸಿರುವ ಬೇಂದ್ರೆ ಭವನವು ಇಂದು ಕಲೆ, ಸಾಹಿತ್ಯ, ಸಾಂಸ್ಕೃತಿಕ ಚಟುವಟಿಕೆಗಳಿಗೆ ಸದುಪಯೋಗವಾಗದೇ ಅನೈತಿಕ ಚಟುವಟಿಕೆಗಳ ತಾಣವಾಗಿ ಗುರುತಿಸಿಕೊಳ್ಳುತ್ತಿರುವುದು ದುರ್ದೈವ. ಮಾಜಿ ಸಂಸದ ಪ್ರೊ. ಐ.ಜಿ. ಸನದಿ ಅವರು ಸಾಂಸ್ಕೃತಿಕ ಭವನವನ್ನು ನಿರ್ಮಾಣ ಮಾಡಿದ್ದಾರೆ. ಸಂಬಂಧಿಸಿದ ಅಧಿಕಾರಿಗಳ ಸಮರ್ಪಕ ನಿರ್ವಹಣೆ ಇಲ್ಲದೇ ನಿರ್ಲಕ್ಷ್ಯಕ್ಕೆ ಒಳಗಾಗಿದೆ. ಆದ್ದರಿಂದ ಭವನಕ್ಕೆ ಅವಶ್ಯಕವಿರುವ ಮೂಲಸೌಲಭ್ಯವನ್ನು ಕಲ್ಪಿಸಬೇಕೆಂದು ಮನವಿಯಲ್ಲಿ ಸಲ್ಲಿಸಿದರು.

## ಸಂತಾನಹರಣ ಶಸ್ತ್ರಚಿಕಿತ್ಸೆ ಪಾಕ್ಷಿಕ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪುರುಷರ ಸಂತಾನಹರಣ ಶಸ್ತ್ರಚಿಕಿತ್ಸೆ ಪಡೆಯುವುದರ ಮೂಲಕ ಸುಖಕರವಾದ ಜೀವನ ನಡೆಸಬಹುದು ಎಂದು ಸ್ತ್ರೀ ರೋಗ ತಜ್ಞರಾದ ಡಾ. ಉಮೇಶ ಕೆಳಗಿನಮನಿ ಹೇಳಿದರು.




ಅವರು ಪಟ್ಟಣದಲ್ಲಿ ನೋ ಸ್ಕಾಲ್‌ಫೆಲ್ ವ್ಯಾಸೆಕ್ಟಮಿ ಪಾಕ್ಷಿಕ ಆಚರಣೆ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತ, ಗಾಯವಿಲ್ಲದ, ಹೊಲಿಗೆ ಇಲ್ಲದೆ ಈ ಶಸ್ತ್ರಚಿಕಿತ್ಸೆ ಮಾಡಿಸಿಕೊಳ್ಳಬಹುದು. ನೋ ಸ್ಕಾಲ್‌ಫೆಲ್ ವ್ಯಾಸೆಕ್ಟಮಿ ಒಂದು ಸುಧಾರಿತ ಮತ್ತು ಬಹಳ ಉತ್ತಮವಾದ ಶಸ್ತ್ರಚಿಕಿತ್ಸಾ ವಿಧಾನವಾಗಿದ್ದು, ಇತ್ತೀಚೆಗೆ ದೇಶದಲ್ಲಿ ಈ ಚಿಕಿತ್ಸಾ ವಿಧಾನ ಅಳವಡಿಸಿಕೊಳ್ಳಲಾಗಿದೆ. ಇದು ಸಂಪೂರ್ಣ ಪರಿಣಾಮಕಾರಿಯಾಗಿದೆ ಎಂದು ಹೇಳಿದರು.

ನವೆಂಬರ್ 21ರಿಂದ 27ರವರೆಗೆ ಜಾಗೃತಿ ಸಪ್ತಾಹ ಕಾರ್ಯಕ್ರಮ ನಡೆಸಿದ್ದು, ನ.28ರಿಂದ ಡಿಸೆಂಬರ್ 4ರವರೆಗೆ ಶಸ್ತ್ರಚಿಕಿತ್ಸೆ ಕ್ಯಾಂಪ್ ನಡೆಯಲಿದೆ. ಪುರುಷರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಹಿರಿಯ ಆರೋಗ್ಯ ನಿರೀಕ್ಷಕ ಡಾ. ಬಿ.ಎಸ್. ಹಿರೇಮಠ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ದಂತ ವೈದ್ಯ ಡಾ. ಪ್ರವೀಣ ಸಜ್ಜನ, ಡಾ. ಎಫ್.ಬಿ. ಹೂಗಾರ, ಡಾ. ಪ್ರಕಾಶ ಕರ್ಜಗಿ ಸೇರಿದಂತೆ ಸಮುದಾಯ ಆರೋಗ್ಯ ಕೇಂದ್ರದ ಸಿಬ್ಬಂದಿಗಳು ಮತ್ತು ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

## ಬಾಲಪ್ರತಿಭೆಗೆ ಲ್ಯಾಪ್‌ಟಾಪ್ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಹೆಲ್ಪಿಂಗ್ ಹ್ಯಾಂಡ್ಸ್ ಫೌಂಡೇಶನ್ ಹಾಗೂ ಗದಗ ಅಪ್ಪುರಾಜ್ ಇವೆಂಟ್ಸ್ ಆಶ್ರಯದಲ್ಲಿ ಕರ್ನಾಟಕ ರಾಜ್ಯೋತ್ಸವ–2024 ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಸಾಧಕ ಮಹನೀಯರಿಗೆ ಕನ್ನಡ ರತ್ನ ಪ್ರಶಸ್ತಿ ಕಾರ್ಯಕ್ರಮ ಇತ್ತೀಚೆಗೆ ನಗರದಲ್ಲಿ ಜರುಗಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯದ ಬಾಲಪ್ರತಿಭೆಗಳಲ್ಲಿ ಮುಂಚೂಣಿಯಲ್ಲಿರುವ ಅಪ್ಪಟ ಕನ್ನಡದ ವಾಗ್ಮಿ, ನಿರರ್ಗಳ ಮಾತುಗಳಿಂದ ರಾಜ್ಯದ ಗಮನ ಸೆಳೆದಿರುವ ಹಾವೇರಿ ಜಿಲ್ಲೆಯ ಆಡೂರ ಗ್ರಾಮದ ಅನುಷಾ ಹಿರೇಮಠ ಇವಳ ಪ್ರತಿಭೆಯನ್ನು ಗುರುತಿಸಿ ನಗರದ ಗಣ್ಯ ವರ್ತಕರಾದ ವಿಜಯಕುಮಾರ ಹಿರೇಮಠ, ಡಾ. ಸಂತೋಷ ತೋಟಗಂಟಿಮಠ ಹಾಗೂ ರವಿಕುಮಾರ ರೆಡ್ಡಿ ಅತ್ಯಾಧುನಿಕ ತ್ರಂತ್ರಜ್ಞಾನದ ಲ್ಯಾಪ್‌ಟಾಪ್‌ನ್ನು ನೀಡಿ ಪ್ರೋತ್ಸಾಹಿಸಿ ಇನ್ನೂ ಹೆಚ್ಚಿನ ಮಟ್ಟದಲ್ಲಿ ಪ್ರತಿಭೆ ಬೆಳಗಲಿ ಎಂದು ಹಾರೈಸಿದರು. ಈ ಸಂದರ್ಭದಲ್ಲಿ ಹಿರಿಯರಾದ ಚಂದ್ರಣ್ಣ ಬಾಳಿಹಳ್ಳಿಮಠ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ವಿಜೇತರಾದ ಡಾ. ಜಿ.ಬಿ. ಬಿಡಿನಹಾಳ, ಎಸ್.ಎಸ್. ಶಿವನಗೌಡರ, ರಾಜು ಗುಡಿಮನಿ, ರಾಜು ಕುರಡಗಿ, ತಾತನಗೌಡ ಪಾಟೀಲ, ಅಪ್ಪುರಾಜ ಭದ್ರಕಾಳಿಮಠ, ಶಿವಯೋಗಿ ಟೆಂಗಿನಕಾಯಿ, ಬಸವರಾಜ ಜಿನಗಾ ಹಾಗೂ ಗಣ್ಯಮಾನ್ಯರು, ಸಂಘಟಕರು ಉಪಸ್ಥಿತರಿದ್ದರು.

## ಬೆದರಿಕೆಯೊಡ್ಡುವ ಕೆಲಸ ನಿಲ್ಲಲಿ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದಲ್ಲಿ ನಡೆಯುತ್ತಿರುವ ಲಿಂಗಾಯತ ಪಂಚಮಸಾಲಿ ಸಮಾಜದ 2ಎ ಮೀಸಲಾತಿ ಹೋರಾಟವನ್ನು ಹತ್ತಿಕ್ಕಲು ರಾಜ್ಯ ಸರ್ಕಾರವು ಪೊಲೀಸ್ ಇಲಾಖೆಯ ಮೊರೆ ಹೋಗಿರುವುದು ಸಂವಿಧಾನ ವಿರೋಧಿ ಕ್ರಮವಾಗಿದೆ ಎಂದು ಪಂಚಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ಬಸವರಾಜ ಮನಗುಂಡಿ ಹೇಳಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಸರ್ಕಾರವು ಪೊಲೀಸ್ ಇಲಾಖೆಯ ಮುಖಾಂತರ ಹೋರಾಟಗಾರರ ಸಂಪರ್ಕ ಮಾಡಿ ಬೆದರಿಸುವ ತಂತ್ರ, ಹೋರಾಟದ ರೂಪರೇಷೆಯ ಮಾಹಿತಿಯನ್ನು ಕಲೆ ಹಾಕುತ್ತಿರುವುದು ಖಂಡನೀಯ. ಕೂಡಲೇ ಸರ್ಕಾರವು ಮತ್ತು ಸರ್ಕಾರದಲ್ಲಿರುವ ಪಂಚಮಸಾಲಿ ಸಮಾಜದ ಸಚಿವರು, ಶಾಸಕರು, ಜನಪ್ರತಿನಿಧಿಗಳು ಸಮಾಜದ ಗುರುಗಳಿಗೆ ಹಾಗೂ ಹೋರಾಟಗಾರರಿಗೆ ಬೆದರಿಕೆ ಒಡ್ಡುವುದನ್ನು ಕೂಡಲೇ ನಿಲ್ಲಿಸಬೇಕು ಎಂದು ಆಗ್ರಹಿಸಿದ್ದಾರೆ.

## ನಿಧನ



### ರುಕ್ಮೀಣಿ ಬೈರವಾಡೆ

ಗದಗ: ನಗರದ ಖಾನತೋಟ ನಾಗಲಿಂಗ ನಗರದ ನಿವಾಸಿಯಾದ ಶ್ರೀಮತಿ ರುಕ್ಮೀಣಿ ಶಟವೆಪ್ಪ ಬೈರವಾಡೆ (ಗೌಳಿ) (99) ನ.28ರಂದು ಸಾಯಂಕಾಲ 6 ಗಂಟೆಗೆ ನಿಧನರಾದರು. ಮೃತರು ಮಕ್ಕಳು, ಮೊಮ್ಮಕ್ಕಳು, ಮರಿಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ನ.29ರ ಮಧ್ಯಾಹ್ನ 12 ಗಂಟೆಗೆ ಸ್ವಗೃಹದಿಂದ ಹೊರಡುವುದು.

# ಕರುನಾಡು ಸಾಂಸ್ಕೃತಿಕ ಉತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಕನ್ನಡ ಕ್ರಿಯಾ ಸಮಿತಿ ಗದಗ ವಿಭಾಗದ ವತಿಯಿಂದ 'ಕರ್ನಾಟಕ ರಾಜ್ಯೋತ್ಸವ ಸಂಭ್ರಮ', 'ಕರುನಾಡು ಸಾಂಸ್ಕೃತಿಕ ಉತ್ಸವ-2024'ನ್ನು ನವೆಂಬರ್ 30ರಂದು ಬೆಳಿಗ್ಗೆ 11 ಗಂಟೆಗೆ ಗದಗನ ವಿಭಾಗೀಯ ಕಾರ್ಯಾಗಾರದ ಹಿಂಭಾಗದಲ್ಲಿ ಶ್ರೀ ಕುಮಾರೇಶ್ವರ ಪಾಠಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ವಾಕರಸಾ ಸಂಸ್ಥೆಯ ಅಧ್ಯಕ್ಷರು ಹಾಗೂ ಕಾಗವಾಡ ಶಾಸಕರಾದ ಭರಮಗೌಡ (ರಾಜು) ಅಲಗೌಡ ಕಾಗೆ ಸಮಾರಂಭ ಉದ್ಘಾಟಿಸುವರು. ಸಾಂಸ್ಕೃತಿಕ ಕಾರ್ಯಕ್ರಮವನ್ನು ವಾಕರಸಾ ಸಂಸ್ಥೆ ಉಪಾಧ್ಯಕ್ಷರಾದ ಪೀರಸಾಬ ಕೌತಾಳ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಆಗಮಿಸುವರು. ವಾಕರಸಾ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಗದಗ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ವಿಜೇತ ಕ್ರೀಡಾಪಟುಗಳಿಗೆ ಪ್ರಶಸ್ತಿ ವಿತರಿಸುವರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ವಿಶೇಷ ಕಾರ್ಯ ಸಾಧನೆಗೈದ ಸಿಬ್ಬಂದಿಗಳಿಗೆ ಬಹುಮಾನ ವಿತರಿಸುವರು.

ಹುಬ್ಬಳ್ಳಿ ವಾಕರಸಾ ಸಂಸ್ಥೆ ಕೇಂ.ಕ ಮುಖ್ಯ ಕಾರ್ಮಿಕ ಕಲ್ಯಾಣಾಧಿಕಾರಿ ಪಿ.ವೈ. ನಾಯಕ ವಿಶೇಷ ಸಾಧನೆಗೈದ ಸಿಬ್ಬಂದಿ ಮಕ್ಕಳಿಗೆ ಬಹುಮಾನ ವಿತರಿಸುವರು. ಗದಗ ವಿಭಾಗದ ವಾಕರಸಾ ಸಂಸ್ಥೆ ವಿಭಾಗೀಯ ನಿಯಂತ್ರಣಾಧಿಕಾರಿ ಡಿ.ಎಂ. ದೇವರಾಜ ಅಧ್ಯಕ್ಷತೆ ವಹಿಸುವರು. ವಿಶೇಷ ಆಹ್ವಾನಿತರಾಗಿ ಪ್ರಾದೇಶಿಕ ಸಾರಿಗೆ ಅಧಿಕಾರಿ ವಿಶಾಲ ಜಿ.ಪಿ, ಗದಗ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಕನ್ನಡ ಕ್ರಿಯಾ ಸಮಿತಿ ವಲಯ ಅಧ್ಯಕ್ಷರಾದ ಗಂಗಾಧರ ಕಮಲದಿನ್ನಿ ಆಗಮಿಸುವರು. ಸಂಸ್ಥೆಯ ಅಧಿಕಾರಿ/ ಸಿಬ್ಬಂದಿ ಹಾಗೂ ಅವರ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ಪ್ರಕಟಣೆ ತಿಳಿಸಿದೆ.

### ಶಿರಹಟ್ಟಿ/ಲಕ್ಷ್ಮೇಶ್ವರ ತಾಲೂಕಾ ಮಟ್ಟದ ಎಸ್‌ಸಿಪಿ/ಟಿಎಸ್‌ಪಿ ಪ್ರಗತಿ ಪರಿಶೀಲನಾ ಸಭೆ

# ಮಾನದಂಡಗಳ ಉಲ್ಲಂಘನೆಯಾಗದಿರಲಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಮೀಸಲು ಮತಕ್ಷೇತ್ರವಾಗಿದ್ದು, ವಿವಿಧ ಇಲಾಖೆಗಳಲ್ಲಿ ಕೈಗೊಳ್ಳಲಾಗುವ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆ (ಎಸ್‌ಸಿಪಿ/ಟಿಎಸ್‌ಪಿ)ಯ ಕೆಲಸ ಮಾಡುವಾಗ ಸಮಿತಿ ಗಮನಕ್ಕೆ ತರುವುದು ಕಡ್ಡಾಯ ಹಾಗೂ ಇದಕ್ಕೆ ಸಂಬಂಧಿಸಿದಂತೆ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಯಿಂದ ದೃಢೀಕರಣವನ್ನು ಸಹ ಪಡೆಯಬೇಕೆಂದು ಶಿರಹಟ್ಟಿ ತಾ.ಪಂ ಇಒ ಎಸ್.ಎಸ್. ಕಲ್ಮನಿ ಹಾಗೂ ಲಕ್ಷ್ಮೇಶ್ವರ ತಾ.ಪಂ ಕೃಷ್ಣಪ್ಪ ಧರ್ಮರ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿಯ ತಾ.ಪಂ ಸಭಾಭವನದಲ್ಲಿ ಜರುಗಿದ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಇಲಾಖಾವಾರು ಚರ್ಚೆಯ ಸಂದರ್ಭದಲ್ಲಿ ಎಲ್ಲ ಇಲಾಖಾ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಮುದಾಯದ ಏಳಿಗೆ ಸಮಿತಿಯ ಮೂಲ ಉದ್ದೇಶವಾಗಿದ್ದು, ಈ ನಿಟ್ಟಿನಲ್ಲಿ ಯಾವುದೇ ರೀತಿಯಲ್ಲಿ ಸರಕಾರದ ಮಾನದಂಡಗಳು ಉಲ್ಲಂಘನೆಯಾಗಬಾರದು. ಫಲಾನುಭವಿಗಳ ಆಯ್ಕೆ ಮಾಡುವಾಗ ಜಾಗರೂಕತೆಯಿಂದ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಬೇಕೆಂದು ಹೇಳಿದರು.




ಕೆಆರ್‌ಐಡಿಎಲ್‌ನಿಂದ ಅರ್ಧಂಬರ್ಧ ಕೆಲಸವಾಗುತ್ತಿದೆ. ಈ ಬಗ್ಗೆ ಸಂಬಂಧಿಸಿದ ಎಇಇಗೆ ಹೇಳಿದರೂ ಸಹ ಸರಿಯಾಗಿ ಸ್ಪಂದಿಸುತ್ತಿಲ್ಲ. ಎಷ್ಟು ಕೆಲಸಗಳು ನಡೆಯುತ್ತಿವೆ ಎಂಬುದರ ಬಗ್ಗೆ ಸ್ಪಷ್ಟ ಮಾಹಿತಿಯನ್ನು ನೀಡಬೇಕು. ಮತ್ತು ಸುವರ್ಣಗಿರಿಯಲ್ಲಿ ಆದರ್ಶ ಗ್ರಾಮ ಯೋಜನೆಯಡಿ ಆದ ಕೆಲಸಗಳ ವೀಕ್ಷಣೆಗೆ ದಿನಾಂಕವನ್ನು ನಿಗದಿಪಡಿಸಬೇಕು. ಕೆಲಸಗಳಲ್ಲಿ ನ್ಯೂನತೆಗಳು ಕಂಡುಬಂದಲ್ಲಿ ಜಿಲ್ಲಾಧಿಕಾರಿಗೆ ವರದಿ ಸಲ್ಲಿಸಲಾಗುವುದು ಎಂದು ಲಕ್ಷ್ಮೇಶ್ವರ ತಾ.ಪಂ ಇಒ ಕೃಷ್ಣಪ್ಪ ಧರ್ಮರ ಕೆಆರ್‌ಐಡಿಎಲ್ ಸಿಬ್ಬಂದಿಗೆ ಹೇಳಿದರು.

ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕುಗಳಲ್ಲಿ ರೇಷ್ಮೆ ಬೆಳೆಗಾರರ ಸಂಖ್ಯೆ ಎಷ್ಟು, ರೇಷ್ಮೆ ಕೃಷಿಗೆ ಉತ್ತೇಜಿಸುವ ಕಾರ್ಯಕ್ರಮಗಳನ್ನು ಎಲ್ಲಿ ನಡೆಸಿದ್ದೀರಿ ಎಂಬ ಬಗ್ಗೆ ಇಒ ಕೃಷ್ಣಪ್ಪ ಧರ್ಮರ ರೇಷ್ಮೆ ಅಧಿಕಾರಿಗಳಲ್ಲಿ ಮಾಹಿತಿಯನ್ನು ಕೇಳಿದರು. ಇದಕ್ಕೆ ಸಮರ್ಪಕ ಉತ್ತರ ಅಧಿಕಾರಿಯಿಂದ ಬರದೇ ಇದ್ದುದರಿಂದ ಮುಂದಿನ ಸಭೆಗೆ ಸಂಪೂರ್ಣ ಮಾಹಿತಿಯನ್ನು ತರಬೇಕು. ಹಾಗೂ ರೇಷ್ಮೆ ಕೃಷಿಯನ್ನು ಉತ್ತೇಜಿಸುವ ಸಲುವಾಗಿ ರೈತರಿಗೆ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು ಸೂಚನೆ ನೀಡಿದರು.

ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕುಗಳಲ್ಲಿಯ ಎಸ್‌ಸಿ/ಎಸ್‌ಟಿ ಕಾಲೋನಿಗಳಲ್ಲಿ ಆರೋಗ್ಯ ಇಲಾಖೆ ವತಿಯಿಂದ ಸಮುದಾಯದ ಜನರ ಆರೋಗ್ಯದ ಸುಧಾರಣೆ ಸಲುವಾಗಿ ಅಲ್ಲಲ್ಲಿ ಕ್ಯಾಂಪ್‌ಗಳನ್ನು ನಡೆಸಬೇಕು. ಕಾಯಿಲೆಗಳನ್ನು ಗುರುತಿಸಿ ಅವರ ಆರೋಗ್ಯ ಸುಧಾರಣೆಗೆ ಆದ್ಯತೆ ನೀಡಬೇಕೆಂದು ಲಕ್ಷ್ಮೇಶ್ವರ ತಾ.ಪಂ ಇಒ ಕೃಷ್ಣಪ್ಪ ಧರ್ಮರ ಹೇಳಿದರು. ಕೇಂದ್ರ ಸರಕಾರದಿಂದ ಬರುವ ಅನುದಾನದಲ್ಲಿ ಎಸ್‌ಸಿ/ಎಸ್‌ಟಿ ಸಮುದಾಯದ ಜನತೆಗೆ ವಿನಿಯೋಗಿಸುತ್ತಿರುವ ಅನುದಾನದ ಸಂಪೂರ್ಣ ಮಾಹಿತಿಯನ್ನು ಮುಂದಿನ ಸಭೆಗೆ ಒದಗಿಸಬೇಕೆಂದು ಶಿರಹಟ್ಟಿ ತಾ.ಪಂ ಇಒ ಎಸ್.ಎಸ್. ಕಲ್ಮನಿ ಆರೋಗ್ಯ ಇಲಾಖೆ ಸಿಬ್ಬಂದಿಗೆ ಸೂಚನೆ ನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಗೋಪಾಲ ಲಮಾಣಿ, ಎಂ.ವಿ. ಸಂಕನೂರ, ಪಿಆರ್‌ಇಡಿ ಎಇಇ ಎಂ.ಪಿ. ರಾಠೋಡ, ಎಡಿಎ ರೇವಣೆಪ್ಪ ಮನಗೂಳಿ, ಅಕ್ಷರದಾಸೋಹ ಎಡಿ ಎಚ್.ಎಸ್. ರಾಮನಗೌಡ್ರ, ಪಿಡಬ್ಲ್ಯುಡಿ ಎಇಇ ತಿಮ್ಮಾಪೂರ ಮುಂತಾದವರು ಉಪಸ್ಥಿತರಿದ್ದರು.

ತಾಲೂಕಿನ 17 ಗ್ರಾಮಗಳಲ್ಲಿ ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ 20 ಲಕ್ಷ 36 ಸಾವಿರ ಅನುದಾನದಲ್ಲಿ ಕಾರ್ಪೊರೇಶನ್‌ನಿಂದ ಈಗಾಗಲೇ ಟೆಂಡರ್ ಪ್ರಕ್ರಿಯೆ ಆಗಿದ್ದು, ಕಾಲೋನಿಗಳಲ್ಲಿ ಸುರಕ್ಷತೆಯ ದೃಷ್ಟಿಯಿಂದ ಅಗತ್ಯ ವಿದ್ಯುತ್ ಸರಬರಾಜಿಗೆ ಕ್ರಮ ವಹಿಸಲಾಗುತ್ತಿದೆ. ಕೆಲಸ ಮಾಡುವುದಕ್ಕಿಂದ ಪೂರ್ವ ಮತ್ತು ತದನಂತರ ಜಿಪಿಎಸ್‌ನಲ್ಲಿ ಫೋಟೋ ತೆಗೆದು ಅದನ್ನು ಆಯೋಗದ ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡಲಾಗುತ್ತಿದೆ. ಜೊತೆಗೆ ಶಿಥಿಲಗೊಂಡಂತಹ ಕಂಬಗಳನ್ನು ಬದಲಾಯಿಸುವ ಕೆಲಸವೂ ನಡೆಯುತ್ತಿದೆ ಎಂದು ಹೆಸ್ಕಾಂ ಎಇಇ ಅಂಜನಪ್ಪ ಸಭೆಗೆ ತಿಳಿಸಿದರು.

# ಉಪದಾನದ ಪ್ರಕರಣಗಳನ್ನು ತ್ವರಿತ ಇತ್ಯರ್ಥಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಉಪದಾನದ ಸಂಬಂಧಿಸಿದ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸುವಂತೆ ಗದಗ ಜಿಲ್ಲೆಯ ರಸ್ತೆ ಸಾರಿಗೆ ಸಂಸ್ಥೆಯ ನಿವೃತ್ತ ನೌಕರರ ಸಂಘವು ಗದಗ ಜಿಲ್ಲಾ ಕಾರ್ಮಿಕ ಇಲಾಖೆಯ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಅವರಿಗೆ ಮನವಿಯನ್ನು ಸಲ್ಲಿಸಿತು.



ರಸ್ತೆ ಸಾರಿಗೆ ಸಂಸ್ಥೆಯ ಕಾರ್ಮಿಕರು ಹಾಕಿರುವ ಉಪದಾನದ ಪ್ರಕರಣವನ್ನು ಆದ್ಯತಾ ಮೇರೆಗೆ ತ್ವರಿತವಾಗಿ ಇತ್ಯರ್ಥಗೊಳಿಸಬೇಕು. ವಿಳಂಬ ನೀತಿಯಿಂದ ಈಗಾಗಲೇ ನಿವೃತ್ತ ನೌಕರರು ಆರೋಗ್ಯದ ಹಲವು ತೊಂದರೆಯಿಂದ ಬಳಲುತ್ತಿದ್ದಾರೆ. ಬಿಪಿ, ಶುಗರ್‌ನಂತಹ ಖಾಯಿಲೆಗಳಿಂದ ಬಳಲುತ್ತಿರುವ ನಿವೃತ್ತ ಕಾರ್ಮಿಕರಿಗೆ ಸಂಚರಿಸಲು ತೊಂದರೆಯಿದ್ದು, ಜಿಲ್ಲಾ ಕಚೇರಿಗೆ ಬರಲು ಸಾಧ್ಯವಾಗುತ್ತಿಲ್ಲ ಎಂದು ಗದಗ ಜಿಲ್ಲಾ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಚ್.ಸಿ. ಕೊಪ್ಪಳ ಹಾಗೂ ಪದಾಧಿಕಾರಿಗಳು ಮನವಿಯಲ್ಲಿ ತಿಳಿಸಿದರು.

ಶೀಘ್ರ ಗತಿಯಲ್ಲಿ ನಿವೃತ್ತ ನೌಕರರ ನ್ಯಾಯಾಲಯದ ಪ್ರಕರಣಗಳನ್ನು ಪರಿಗಣಿಸಿ, ಮಾನವೀಯತೆಯ ದೃಷ್ಟಿಯಿಂದ ಉಪದಾನಕ್ಕೆ ಸಂಬಂಧಿಸಿದ ಪ್ರಕರಣಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಲು ವಿನಂತಿಸಿದರು.

ಮನವಿಗೆ ಸ್ಪಂದಿಸಿದ ಕಾರ್ಮಿಕ ಇಲಾಖೆಯ ಅಧಿಕಾರಿಗಳು, ನಿವೃತ್ತ ನೌಕರರ ಸಮಸ್ಯೆಗಳಿಗೆ ಸ್ಪಂದಿಸುವ ಭರವಸೆ ನೀಡಿದರು. ನಿಯೋಗದಲ್ಲಿ ಕಾರ್ಯಾಧ್ಯಕ್ಷ ಹನುಮಂತಪ್ಪ ದೊಡ್ಡಮನಿ, ಕಾರ್ಯದರ್ಶಿ ಆರ್.ಸಿ. ಅಣ್ಣಿಗೇರಿ, ಉಪಾಧ್ಯಕ್ಷ ಬಿ.ಜಿ. ಕೆಂಗಾರಕರ್, ಜಂಟಿ ಕಾರ್ಯದರ್ಶಿ ಜಿ.ಎಮ್. ಮನಿಯಾರ್, ಸುಲೇಮಾನ ಬನ್ನೂರ್, ಮನ್ಸಬ್ದಾರ, ಎಸ್.ಟಿ. ಮುಂಡರಗಿ, ಬಿ.ಕೆ. ಹೊಸಮನಿ, ಮಾನ್ವಿ, ಅಶೋಕ ಕುಮಾರ ಮುಂತಾದವರಿದ್ದರು.

# ಯುವ ಜನೋತ್ಸವದಲ್ಲಿ ವಿದ್ಯಾರ್ಥಿಗಳ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಜರುಗಿದ ಕವಿವಿ ಧಾರವಾಡ ಗದಗ ಜಿಲ್ಲಾ ವಲಯ ಮಟ್ಟದ ಯುವಜನೋತ್ಸವದಲ್ಲಿ ಮನೋರಮಾ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿ ಬಹುಮಾನ ಗೆದ್ದಿದ್ದಾರೆ.



ವಿಜೇತ ವಿದ್ಯಾರ್ಥಿಗಳನ್ನು ಅಭಿನಂದಿಸಿದ ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ ಮಾತನಾಡಿ, ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಸಾಧನೆಯತ್ತ ಸಾಗಿರುವುದು ಸಂತಸ ತಂದಿದೆ ಎಂದರು.

ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ವಿದ್ಯಾರ್ಥಿಗಳು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದಾಗ ಆಗುವ ಸಂತೋಷಕ್ಕೆ ಮಿತಿ ಇಲ್ಲ. ಬಹುಮಾನ ಪಡೆಯುವುದಕ್ಕಿಂತ ಭಾಗವಹಿಸುವಿಕೆ ಮುಖ್ಯವಾಗಿದೆ ಎಂದರು.

ಪಾಶ್ಚಾತ್ಯ ಗಾಯನದಲ್ಲಿ ಕಂಗನಾ ಪವಾರ ಪ್ರಥಮ, ಮೆಹಂದಿ ಸ್ಪರ್ಧೆಯಲ್ಲಿ ಉಮ್ಮಿ ಜವೇರಿಯಾ ಪ್ರಥಮ, ಭಾಷಣ ಸ್ಪರ್ಧೆಯಲ್ಲಿ ಸಯ್ಯದಾ ತಂಜಿಮ ಖಾಜಿ ಪ್ರಥಮ, ಮೈಮ್ ಸ್ಪರ್ಧೆಯಲ್ಲಿ ಇಂದ್ರ ಕುಮಾರ, ಅಭಿಷೇಕ, ಸಾಗರ, ಮೆಹಬೂಬ, ಅಮೋಘ ಹಾಗೂ ಪುರುಷೋತ್ತಮ ದ್ವಿತೀಯ, ಜಾನಪದ ಹಾಡಿನ ಸ್ಪರ್ಧೆಯಲ್ಲಿ ಅನಿತಾ, ಪ್ರಮೋದಿನಿ, ತನುಜಾ, ಅಕ್ಷತಾ, ಹಾಗೂ ಶೃತಿ ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಸಾಧನೆಗೈದ ವಿದ್ಯಾರ್ಥಿಗಳಿಗೆ ಸಂಸ್ಥೆಯ ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ ಬಿಸಿಎ ಸಂಯೋಜಕರುಗಳಾದ ಪ್ರೊ. ಸವಿತಾ ಪೂಜಾರ, ಪ್ರೊ. ಅಲ್ವಿನಾ ಡಿ, ಪ್ರೊ. ಚೈತ್ರಾ ಡಿ, ಪ್ರೊ. ಶಾಹಿದಾ ಶಿರಹಟ್ಟಿ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

# ರಾಷ್ಟ್ರಮಟ್ಟದ ಕರಾಟೆಯಲ್ಲಿ ಸಾಧನೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಇತ್ತೀಚೆಗೆ ತುಮಕೂರಿನಲ್ಲಿ ನಡೆದ ರಾಷ್ಟ್ರಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಅಣ್ಣಿಗೇರಿ ತಾಲೂಕಿನ ನಲವಡಿಯ ಶ್ರೀ ವಿವೇಕಾನಂದ ವಿದ್ಯಾಸಂಸ್ಥೆಯ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ವಿದ್ಯಾರ್ಥಿಗಳಾದ ಪ್ರವೀಣ ಸಿರೆಮ್ಮನವರ ಪ್ರಥಮ, ಹನಮಂತಗೌಡ ಪಾಟೀಲ ಪ್ರಥಮ, ಚಂದನಾ ಸಿರೇಮ್ಮನವರ ದ್ವಿತೀಯ, ಕಾರ್ತಿಕರಡ್ಡಿ ಆಲೂರ ದ್ವಿತೀಯ ಸ್ಥಾನ ಪಡೆದಿದ್ದಾರೆ.




ವಿಜೇತ ಎಲ್ಲ ಕರಾಟೆ ವಿದ್ಯಾರ್ಥಿಗಳಿಗೆ ಹಾಗೂ ಕರಾಟೆ ತರಬೇತಿ ನೀಡಿದ ಮೆಹಬೂಬ ದೊಡ್ಡಮನಿರವರಿಗೂ ಸಂಸ್ಥೆಯ ಆಡಳಿತ ಮಂಡಳಿಯ ಜಿ.ಎಚ್. ಗಿರಿರಡ್ಡಿ ವ್ಹಿ.ವ್ಹಿ. ಪಾಟೀಲ, ಕೆ.ಎಸ್. ಮಿಶ್ರಿಕೋಟಿ, ಎಂ.ಎಂ. ಯಾದವಾಡ, ಜಿ.ಡಿ. ಪಾಟೀಲ, ಎಂ.ಎಚ್. ಬುಳ್ಳಣ್ಣವರ, ಎಂ.ಐ. ಬುಳ್ಳಣ್ಣವರ ಹಾಗೂ ಶಾಲೆಯ ಶಿಕ್ಷಕ ವೃಂದ, ಪಾಲಕರು, ವಿದ್ಯಾರ್ಥಿ ವೃಂದದವರು ಶುಭ ಹಾರೈಸಿದ್ದಾರೆ.

# ರೈಫಲ್ ಶೂಟರ್‌ಗಳು ರಾಷ್ಟ್ರಮಟ್ಟಕ್ಕೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಪದವಿಪೂರ್ವ ಶಿಕ್ಷಣ ಇಲಾಖೆ ಸಹಯೋಗದಲ್ಲಿ ನಡೆದ ರಾಜ್ಯ ಮಟ್ಟದ 10 ಮೀಟರ್ ಏರ್ ರೈಫಲ್ ಶೂಟಿಂಗ್‌ನಲ್ಲಿ ಗದಗ ಸ್ಪೋರ್ಟ್ಸ್ ಅಕಾಡೆಮಿಯ ನಾಲ್ವರು ಶೂಟರ್‌ಗಳು ಭಾಗವಹಿಸಿ ಸಾಧನೆ ಮೆರೆದಿದ್ದಾರೆ.



ಸಂಜನಾ ಎಸ್.ಚಿಕ್ಕನಗೌಡರ ದ್ವಿತೀಯ, ಮನ್ವಿತಾ ಎಂ.ಬಡ್ನಿ ತೃತೀಯ, ಅಮೃತಾ ಕಬಾಡಿ ನಾಲ್ಕನೇ ಸ್ಥಾನ, 10 ಮೀಟರ್ ಏರ್ ಪಿಸ್ತೂಲ್‌ನಲ್ಲಿ ಪಾಲ್ಗುಣಿ ವಾರಕರ್ ನಾಲ್ಕನೇ ಸ್ಥಾನ ಹಾಗೂ ಸುಶಾಂತ ಪಿ.ಉಗಲಾಟ ಭಾಗವಹಿಸಿ ತಮ್ಮ ಶೂಟಿಂಗ್ ಪ್ರತಿಭೆಯನ್ನು ಪ್ರದರ್ಶಿಸಿದ್ದಾರೆ.

2025ರ ಜ.2ರಂದು ಮಧ್ಯಪ್ರದೇಶದ ಭೋಪಾಲ್‌ನಲ್ಲಿ ನಡೆಯವ ರಾಷ್ಟ್ರಮಟ್ಟದ ಶೂಟಿಂಗ್ ಸ್ಪರ್ಧೆಗೆ ಸಂಜನಾ ಎಸ್. ಚಿಕ್ಕನಗೌಡರ, ಮನ್ವಿತಾ ಎಂ.ಬಡ್ನಿ ಆಯ್ಕೆಯಾಗಿದ್ದಾರೆ. ವಿಜೇತರಿಗೆ ಸಂಸ್ಥೆಯ ಪದಾಧಿಕಾರಿಗಳಾದ ಶ್ರೀನಿವಾಸ ಹುಯಿಲಗೋಳ, ವಿಜಯಕುಮಾರ ಗಡ್ಡಿ, ಮುರಘರಾಜೇಂದ್ರ ಬಡ್ನಿ, ಪ್ರಾಚಾರ್ಯರಾದ ಶಿವಕುಮಾರ ಹಾವೇರಿ, ಸನ್ಮಾರ್ಗ ಕಾಲೇಜಿನ ಪ್ರಾಚಾರ್ಯರಾದ ಮೃತ್ಯುಂಜಯ ಹಿರೇಮಠ, ವ್ಹಿ.ಎಂ. ಚಿಕ್ಕಣ್ಣ, ಗಣೇಶ ಕಬಾಡಿ, ಸತೀಶ ಚಿಕ್ಕನಗೌಡರ, ಪ್ರದೀಪ ಉಗಲಾಟ ಹಾಗೂ ತರಬೇತುದಾರರಾದ ಬಸವರಾಜ ಹೊಂಬಾಳಿ ಅಭಿನಂದಿಸಿದ್ದಾರೆ.

ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಕಡಕೋಳ**
**ತಾ : ಶಿರಹಟ್ಟಿ ಜಿ : ಗದಗ**

ನಂ: ಗ್ರಾ.ಪಂ./ಕಡಕೋಳ/ಟೆಂಡರ/2024-25 ದಿನಾಂಕ : 29-11-2024

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ ನಿಯಮಗಳನ್ವಯ ಅರ್ಹ ಗುತ್ತಿಗೆದಾರ/ಸರಬರಾಜುದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, ಮುಖಾಂತರ **01** ಕಾಮಗಾರಿಯ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2024-25ನೇ ಸಾಲಿನ **MGNREGA** ಯೋಜನೆ ಅಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರ/ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, **https://kppp.karnataka.gov.in** ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆಗಳು ಈ ಕೆಳಗಿನಂತೆ ಇರುತ್ತವೆ.

(1) **INDENT NO : RDPR/2024-25/IND5924**

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. **4.80** To **5.00** Lack.

ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ : ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್‌ನಂತೆ, ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **30-11-2024** ರಿಂದ **14-12-2024** ರಂದು 16.00 ಗಂಟೆಯವರೆಗೆ. ಟೆಂಡರ ತೆರೆಯುವ ದಿನಾಂಕ : **15-12-2024** ರಂದು 16.30 ಗಂಟೆಗೆ ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ/- ಪಂಚಾಯತ ಅಭಿವೃದ್ಧಿ ಅಧಿಕಾರಿಗಳು
ಗ್ರಾಮ ಪಂಚಾಯತ ಕಡಕೋಳ, ತಾಲೂಕ: ಶಿರಹಟ್ಟಿ ಜಿಲ್ಲಾ : ಗದಗ

ವಾಸಾಸಂಇ/ಗದಗ/ಕೆಎಸ್‌ಎಂಸಿಎ/424/2024-25

### ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ವಿವಿಧ ಸ್ಪರ್ಧೆಗಳ ಆಯೋಜನೆ

# ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿಗದಗ

2024-25ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಯುವಜನೋತ್ಸವದ ಆಯ್ಕೆ ಸ್ಪರ್ಧೆಯನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ಯುವ ಸಂಘಗಳ ಒಕ್ಕೂಟ ಹಾಗೂ ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯ ಗದಗ ಇವರ ಸಹಯೋಗದೊಂದಿಗೆ ಡಿಸೆಂಬರ್ 4ರಂದು ಬೆಳಿಗ್ಗೆ 9 ಗಂಟೆಗೆ ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಷಯಾಧಾರಿತ ಸ್ಪರ್ಧೆಗಳಾದ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ನಾವೀನ್ಯತೆ (ವೈಯಕ್ತಿಕ, ಗುಂಪು), ಸಾಂಸ್ಕೃತಿಕ ಸ್ಪರ್ಧೆಗಳಾದ ಜನಪದ ನೃತ್ಯ (ತಂಡ), ಕನ್ನಡ/ಆಂಗ್ಲ/ಹಿಂದಿ ಭಾಷೆಯಲ್ಲಿ, ಜನಪದ ಗೀತೆ (ತಂಡ, ವೈಯಕ್ತಿಕ) ಕನ್ನಡ/ಆಂಗ್ಲ/ಹಿಂದಿ ಭಾಷೆಯಲ್ಲಿ, ಜನಪದ ನೃತ್ಯ (ವೈಯಕ್ತಿಕ) ಕನ್ನಡ/ಆಂಗ್ಲ/ ಹಿಂದಿ ಭಾಷೆಯಲ್ಲಿ, ಜೀವನ ಕೌಶಲ್ಯ ಸ್ಪರ್ಧೆಗಳಾದ ಕವಿತೆ ಬರೆಯುವುದು (ವೈಯಕ್ತಿಕ), ಕನ್ನಡ/ ಆಂಗ್ಲ/ಹಿಂದಿ ಭಾಷೆಯಲ್ಲಿ, ಕಥೆ ಬರೆಯುವುದು (ವೈಯಕ್ತಿಕ) ಕನ್ನಡ/ಆಂಗ್ಲ/ ಹಿಂದಿ ಭಾಷೆಯಲ್ಲಿ, ಚಿತ್ರಕಲೆ, ಡಿಕ್ಲೇಮೇಷನ್ (ಘೋಷಣೆ) ಕನ್ನಡ/ಆಂಗ್ಲ/ ಹಿಂದಿ ಭಾಷೆಯಲ್ಲಿ ಇತರಬೇಕು. ಯುವ ಕೃತಿಗಳಾದ ಗುಡಿ ಕೈಗಾರಿಕೆ ಕಲಾ ಪ್ರಕಾರ, ನೇಕಾರಿಕೆ/ ಜವಳಿ /ಕೃಷಿ ಉತ್ಪನ್ನಗಳು, ಮೊಬೈಲ್ ಫೋಟೋಗ್ರಾಫಿ ಸ್ಪರ್ಧೆಗಳು ನಡೆಯಲಿವೆ.

ವಿಷಯಧಾರಿತ ಸ್ಪರ್ಧೆಗಳು, ಸಾಂಸ್ಕೃತಿಕ, ಜೀವನ ಕೌಶಲ್ಯ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದವರಿಗೆ ನಗದು ಬಹುಮಾನ ನೀಡಲಾಗುವುದು. ಆಸಕ್ತ ಸ್ಪರ್ಧಾಳುಗಳು ಡಿಸೆಂಬರ್ 3ರೊಳಗಾಗಿ ಅರ್ಜಿ ಸಲ್ಲಿಸಬಹುದು. ಯುವಕ/ಯುವತಿಯರು ಡಿಸೆಂಬರ್ 4ರಂದು ಬೆ 9 ಗಂಟೆಯೊಳಗೆ ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯ ಗದಗ ಇಲ್ಲಿ ವರದಿ ಮಾಡಿಕೊಳ್ಳಬೇಕು ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ-ಗದಗ, ದೂರವಾಣಿ ಸಂಖ್ಯೆ-08372-238345 ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತಿಯುಳ್ಳ ಯುವಕ/ಯುವತಿಯರು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ..ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಅರ್ಜಿ ನಮೂನೆ ಭರ್ತಿ ಮಾಡಬಹುದು ಅಥವಾ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ನೇರವಾಗಿ ಭಾಗವಹಿಸಲು ಅವಕಾಶ ಒದಗಿಸಲಾಗಿದೆ. ಭಾಗವಹಿಸಿದ ಸ್ಪರ್ಧಾಳುಗಳಿಗೆ ಯಾವುದೇ ರೀತಿಯ ಪ್ರವಾಸ ಭತ್ಯೆಯನ್ನು ನೀಡಲಾಗುವುದಿಲ್ಲ. ಮಧ್ಯಾಹ್ನ ಲಘು ಉಪಹಾರದ ವ್ಯವಸ್ಥೆಯನ್ನು ಮಾಡಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka